PRGI NO : KNKAN/26/A0884

E NAMMA DHURTHI NEWS KANNADA DAILY NEWS PAPER

ಈ ನಮ್ಮ

# ಧೃತಿ ನ್ಯೂಸ್

ಸಧೃಡತೆಯ ಹೆಜ್ಜೆಯೊಂದಿಗೆ..., ಕನ್ನಡ ದಿನಪತ್ರಿಕೆ

- ಕೊಪ್ಪಳ
- ವಿಜಯನಗರ
- ರಾಯಚೂರು
- ಬಳ್ಳಾರಿ
- ಗದಗ
- ಬಾಗಲಕೋಟೆ
- ಹಾವೇರಿ
- ಧಾರವಾಡ

ಸಂಪಾದಕರು: ಚಂದ್ರಕಾಂತ | ಸಂಪುಟ: 01 ಸಂಚಿಕೆ: 217 ಪುಟಗಳು: 04 ಬೆಲೆ: 02 ದಿನಾಂಕ: 15-10-2026 ಗುರುವಾರ | email: enammadhruthinews@gmail.com | Pho : 7353595904

## ಬರದಿಂದ ಉಂಟಾದ ನಷ್ಟದ ಕುರಿತು ಇನ್ನೊಂದು ವಾರದಲ್ಲಿ ಅಂತಿಮ ಮೆಮೊರಾಂಡಮ್ ಸಿದ್ಧ : ಡಿಸಿಎಂ

**ಧೃತಿ ನ್ಯೂಸ್ ಸುದ್ದಿ**

ಬೆಂಗಳೂರು: ರಾಜ್ಯದಲ್ಲಿ ಬರದಿಂದ ಉಂಟಾಗಿರುವ ನಷ್ಟದ ಕುರಿತು ಅಂತಿಮ ಮೆಮೊರಾಂಡಮ್ ಸಿದ್ಧಪಡಿಸಲಾಗುತ್ತಿದ್ದು, ಬಹುಶಃ ಇನ್ನೊಂದು ವಾರದಲ್ಲಿ ಈ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ಉಪಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಡಾ. ಜಿ. ಪರಮೇಶ್ವರ ತಿಳಿಸಿದರು.



ಸದಾಶಿವನಗರದ ತಮ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂದು ಮತ್ತೆ 9 ತಾಲ್ಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಲಾಗುತ್ತಿದ್ದು, ಈ ಮೂಲಕ ಬರಪೀಡಿತ ತಾಲ್ಲೂಕುಗಳ ಸಂಖ್ಯೆ 226ಕ್ಕೆ ಏರಿಕೆಯಾಗಲಿದೆ. ಈ ತಾಲೂಕುಗಳಲ್ಲಿ ಗ್ರೌಂಡ್ ಟ್ರೂಥಿಂಗ್ ಪ್ರಕ್ರಿಯೆ ಪೂರ್ಣಗೊಂಡಿದೆ. ಇನ್ನುಳಿದ ಕೆಲವು ತಾಲೂಕುಗಳಲ್ಲಿ ಟ್ರಿಗರ್-1 ಮಾನದಂಡಗಳ ಪರಿಶೀಲನೆ ನಡೆಯುತ್ತಿದೆ. ಅವುಗಳು ಅರ್ಹತೆ ಪಡೆದರೆ ಗ್ರೌಂಡ್ ಟ್ರೂಥಿಂಗ್‌ಗೆ ಕಳುಹಿಸಲಾಗುವುದು ಎಂದು ಹೇಳಿದರು.

ರಾಜ್ಯದಲ್ಲಿ ಬರದಿಂದ ಉಂಟಾಗಿರುವ ಒಟ್ಟು ನಷ್ಟದ ಅಂದಾಜು ಅಂತಿಮ ಮೆಮೊರಾಂಡಮ್ ಸಿದ್ಧಪಡಿಸುವ ಸಂದರ್ಭದಲ್ಲಿ ಸ್ಪಷ್ಟವಾಗಲಿದೆ. ಅದರ ಪ್ರಮಾಣಕ್ಕೆ ಅನುಗುಣವಾಗಿ ಎನ್‌ಡಿಆರ್‌ಎಫ್ ಮಾರ್ಗಸೂಚಿಗಳ ಪ್ರಕಾರ ಪರಿಹಾರದ ಮೊತ್ತವನ್ನು ಲೆಕ್ಕಹಾಕಲಾಗುವುದು. ಕಳೆದ ವರ್ಷ ಸುಮಾರು 18 ಸಾವಿರ ಕೋಟಿ ಪರಿಹಾರ ಕೋರಲಾಗಿತ್ತು. ಈ ಬಾರಿ ಇಡೀ ರಾಜ್ಯದಲ್ಲಿ ನಷ್ಟ ಸಂಭವಿಸಿದ್ದು, ಈಗಾಗಲೇ 226 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸುವ ಹಂತ ತಲುಪಿದ್ದೇವೆ. ಇನ್ನಷ್ಟು ತಾಲೂಕುಗಳು ಅರ್ಹತೆ ಪಡೆದರೆ ನಷ್ಟದ ಪ್ರಮಾಣ ಮತ್ತಷ್ಟು ಹೆಚ್ಚಾಗಲಿದೆ. ಹೀಗಾಗಿ, ಈ ಬಾರಿ ಕೇಂದ್ರದಿಂದ ಕೋರಲಾಗುವ ಪರಿಹಾರದ ಮೊತ್ತವೂ ಹೆಚ್ಚಾಗುವ ಸಾಧ್ಯತೆಯಿದೆ ಎಂದು ತಿಳಿಸಿದರು. ಬರ ಪರಿಹಾರಕ್ಕೆ ಸಂಬಂಧಿಸಿದಂತೆ ಎನ್‌ಡಿಆರ್‌ಎಫ್ ಮಾರ್ಗಸೂಚಿಗಳನ್ನು ಸಡಿಲಗೊಳಿಸುವಂತೆ ರಾಜ್ಯ ಸರ್ಕಾರ ಕೇಂದ್ರಕ್ಕೆ ಮನವಿ ಸಲ್ಲಿಸಿದೆ. ಈ ಕುರಿತು ನಾನು ಮತ್ತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಪತ್ರ ಬರೆದಿದ್ದೇವೆ. ಇದಕ್ಕೆ ಸಂಬಂಧಿಸಿದಂತೆ ನನಗೆ ಕೇಂದ್ರ ಕೃಷಿ ಸಚಿವರಿಂದ ಪತ್ರ ಬಂದಿದ್ದು, ವಿಷಯವನ್ನು ಪರಿಶೀಲಿಸುವುದಾಗಿ ತಿಳಿಸಿದ್ದಾರೆ. ಇದನ್ನು ಹೊರತುಪಡಿಸಿ ಕೇಂದ್ರದಿಂದ ಬೇರೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ಹೇಳಿದರು.

ಅಂತಿಮ ಮೆಮೊರಾಂಡಮ್ ಸಿದ್ಧವಾದ ಬಳಿಕ ಮುಖ್ಯಮಂತ್ರಿ, ನಾನು ಹಾಗೂ ಇತರರನ್ನು ಒಳಗೊಂಡ ನಿಯೋಗ ದೆಹಲಿ ಭೇಟಿಯ ಕುರಿತು ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು. ನಿಯೋಗವು ಖುದ್ದಾಗಿ ದೆಹಲಿಗೆ ತೆರಳಿ ಕೇಂದ್ರ ಸರ್ಕಾರಕ್ಕೆ ಮೆಮೊರಾಂಡಮ್ ಸಲ್ಲಿಸಲಿದೆ. ನಷ್ಟದ ವಿವರವನ್ನು ಪ್ರಸ್ತಾಪಿಸಿ ಪರಿಹಾರಕ್ಕೆ ಕೋರಲಾಗುವುದು ಎಂದು ತಿಳಿಸಿದರು. ಎಸ್‌ಸಿ-ಎಸ್‌ಟಿ ಮೀಸಲಾತಿಗೆ ಸಂಬಂಧಿಸಿದಂತೆ ಹೈಕೋರ್ಟ್ ತೀರ್ಪು ವಿಚಾರವಾಗಿ ನಾಳೆ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಪ್ರಸ್ತಾಪಿಸಿ ಚರ್ಚಿಸಲಾಗುವುದು ಎಂದು ತಿಳಿಸಿದರು. ಈ ವಿಚಾರದಲ್ಲಿ ಸುಪ್ರೀಂ ಕೋರ್ಟ್‌ಗೆ ಮೇಲನವಿ ಸಲ್ಲಿಸಬೇಕೇ ಅಥವಾ ಒಂಬತ್ತನೇ ಶೆಡ್ಯೂಲ್‌ಗೆ ಸೇರಿಸುವಂತೆ ಭಾರತ ಸರ್ಕಾರಕ್ಕೆ ಮನವಿ ಸಲ್ಲಿಸಬೇಕೇ ಎಂಬುದರ ಕುರಿತು ಸಂಪುಟದಲ್ಲಿ ಚರ್ಚಿಸಿ ತೀರ್ಮಾನ ಕೈಗೊಳ್ಳಬೇಕಿದೆ. ಸಚಿವ ಸಂಪುಟದ ನಿರ್ಧಾರದ ಬಳಿಕ ಮುಂದಿನ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಹೇಳಿದರು.

## ಕನಕಗಿರಿ : ವಿಧಾನಪರಿಷತ್ ಶಿಕ್ಷಕರ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶಶೀಲ್ ಜೀ ನಮೋಶಿ ಪರ ಬಿರುಸಿನ ಮತಯಾಚನೆ

**ಧೃತಿ ನ್ಯೂಸ್ ಸುದ್ದಿ**

ಕನಕಗಿರಿ: ಪಟ್ಟಣದ ಪಂಪಣ್ಣ ಶರಣಪ್ಪ ಗುಗ್ಗಳ ಶೆಟ್ಟರ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ, ವಿಧಾನಪರಿಷತ್ ಶಿಕ್ಷಕರ ಮತಕ್ಷೇತ್ರದ ಭಾರತೀಯ ಜನತಾ ಪಕ್ಷದ (ಬಿಜೆಪಿ) ಅಧಿಕೃತ ಅಭ್ಯರ್ಥಿಗಳಾದ ಶಶೀಲ್ ಜೀ ನಮೋಶಿರವರ ಪರವಾಗಿ ಅ.14ರಂದು ಬುಧವಾರ ಮಧ್ಯಾಹ್ನ 2:00 ಗಂಟೆಗೆ ವ್ಯಾಪಕ ಮತಯಾಚನೆಯನ್ನು ಹಮ್ಮಿಕೊಳ್ಳಲಾಯಿತು.



ಈ ಪ್ರಮುಖ ಚುನಾವಣಾ ಪ್ರಚಾರ ಕಾರ್ಯಕ್ರಮದಲ್ಲಿ ರಾಜ್ಯದ ವಿಧಾನಪರಿಷತ್ ಸದಸ್ಯರಾದ ಶ್ರೀ ಎನ್. ರವಿಕುಮಾರ್ ಜೀ ಹಾಗೂ ಹಿರಿಯ ಪ್ರಮುಖ ಮುಖಂಡರು ಆಗಮಿಸಿ, ಕಾಲೇಜಿನ ಶಿಕ್ಷಕರು ಹಾಗೂ ಸಿಬ್ಬಂದಿಯನ್ನು ಭೇಟಿ ಮಾಡಿ ಬಿಜೆಪಿ ಅಭ್ಯರ್ಥಿಗೆ ಪ್ರಥಮ ಪ್ರಾಶಸ್ತ್ಯದ ಮತವನ್ನು ನೀಡುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಕನಕಗಿರಿ ಮಂಡಲ ಅಧ್ಯಕ್ಷರಾದ ಸಣ್ಣ ಕನಕಪ್ಪ, ಜಿಲ್ಲಾ ಬಿಜೆಪಿ ಉಪಾಧ್ಯಕ್ಷರಾದ ಮಹಾಂತೇಶ್ ಸಜ್ಜನ, ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿಗಳಾದ ಶಿವುಕುಮಾರ್ ಅರಿಕೇರಿ, ಜಿಲ್ಲಾ ಸಾಮಾಜಿಕ ಜಾಲತಾಣ ಸಂಚಾಲಕರಾದ ಮಂಜುನಾಥ್ ಯತ್ನಟ್ಟಿ, ಜಿಲ್ಲಾ ಎಸ್.ಸಿ. ಮೋರ್ಚಾ ಕಾರ್ಯದರ್ಶಿಗಳಾದ ಲಿಂಗಪ್ಪ ಪೂಜಾರ್, ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಗ್ಯಾನಪ್ಪ ಗಾಣದಾಳ, ಮಂಡಲ ಉಪಾಧ್ಯಕ್ಷರಾದ ಕನಕಪ್ಪ ಯಾದವ್, ಪಟ್ಟಣ ಪಂಚಾಯತ್ ಸದಸ್ಯರಾದ ಶೇಷಪ್ಪ ಪೂಜಾರ್, ನರಸಪ್ಪ ಕುರುಗೋಡು, ಯುವ ಮೋರ್ಚಾ ಅಧ್ಯಕ್ಷರಾದ ವಿನಾಯಕ ಚಿತ್ತಾರಕಿ, ಹಾಗೂ ಪ್ರಮುಖರಾದ ವಾಗೀಶ್ ಹಿರೇಮಠ, ಶಿವಾನಂದ ಮೇಟಿ, ಅರುಣ್ ಬೂಸನೂರ್ ಮಠ ಸೇರಿದಂತೆ ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ಅನೇಕ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

## ನವರಾತ್ರಿ ಉತ್ಸವ 4ನೇ ದಿನ : ಗಾಡ ನೀಲಿ ಸೀರೆ ಧರಿಸಿ ಸಂಭ್ರಮಿಸಿದ ಸ್ನೇಹಿತೆಯರು



**ಧೃತಿ ನ್ಯೂಸ್ ಸುದ್ದಿ**

ಕುಕನೂರು: ನವರಾತ್ರಿ ಉತ್ಸವ 4ನೇ ದಿನ ಮಾ ಕುಷ್ಮಾಂಡು ದೇವಿ ಪೂಜೆ ನಿಮಿತ್ಯ ಕುಕನೂರು ಪಟ್ಟಣದ ಮಹಾಮಾಯ ದೇವಸ್ಥಾನದಲ್ಲಿ ಬುಧವಾರ ನೀಲಿ ಸೀರೆ ಧರಿಸಿದ ಸ್ನೇಹಿತೆಯರು ಫೋಟೋ ಕ್ಲಿಕ್ಕಿಸಿ ಸಂಭ್ರಮಿಸಿದರು. ಮಂಜುಳಾ, ನೇತ್ರಾ, ಚನ್ನಮ್ಮ, ಶಿವಲೀಲಾ, ಈರಮ್ಮ, ಲಕ್ಷ್ಮಿ, ಅಕ್ಕಮ್ಮ, ಅಂದಮ್ಮ, ಸವಿತಾ ಇದ್ದರು.

## ಕೊಪ್ಪಳ ವಿವಿಗೆ ಸ್ವಂತ ಕಟ್ಟಡ, ನಿವೇಶನ ಒದಗಿಸಲು ಒತ್ತಾಯಿಸಿ ದಿ, 16 ರಂದು ಎಬಿವಿಪಿ ಪ್ರತಿಭಟನೆ

**ಧೃತಿ ನ್ಯೂಸ್ ಸುದ್ದಿ**

ಕೊಪ್ಪಳ: ಕೊಪ್ಪಳ ವಿಶ್ವ ವಿದ್ಯಾಲಯಕ್ಕೆ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಸೂಕ್ತ ನಿವೇಶನ ಮತ್ತು ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕೆಂದು ಒತ್ತಾಯಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದೆ. ಬೇಡಿಕೆಗಳನ್ನು ಈಡೇರಿಸದಿದ್ದಲ್ಲಿ ಅಕ್ಟೋಬರ್ 16ರಂದು ಬೆಳಗ್ಗೆ 10.30ಕ್ಕೆ ಹೋರಾಟ ನಡೆಸುವುದಾಗಿ ಎಚ್ಚರಿಸಲಾಗಿದೆ ಎಂದು ಎಬಿವಿಪಿ ಜಿಲ್ಲಾ ಸಂಚಾಲಕ ಹಮ್ಮಿಗೇಶ್ ತಿಳಿಸಿದರು.

ಅವರು ಬುಧವಾರ ನಗರದಲ್ಲಿರುವ ಪತ್ರಿಕಾ ಭವನದಲ್ಲಿ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾಧ್ಯಮದೊಂದಿಗೆ ಮಾತನಾಡಿ ಸರಕಾರಕ್ಕೆ ಎಚ್ಚರಿಸಿದರು, ವಿಶ್ವವಿದ್ಯಾಲಯ ಸ್ಥಾಪನೆಯಾಗಿ ಮೂರು ವರ್ಷಗಳು ಕಳೆದರೂ ಸ್ವಂತ ಕಟ್ಟಡಕ್ಕೆ ಅಗತ್ಯವಿರುವ ನಿವೇಶನದ ವ್ಯವಸ್ಥೆಯಾಗಲಿ ಅಥವಾ ಶಾಶ್ವತ ಕಟ್ಟಡವಾಗಲಿ ಇಲ್ಲದಿರುವುದು ಅತ್ಯಂತ ಗಂಭೀರ ಹಾಗೂ ಖಂಡನೀಯ ವಿಚಾರವಾಗಿದೆ ಎಂದು ಎಬಿವಿಪಿ ತಿಳಿಸಿದೆ. ಸ್ವಂತ ಕಟ್ಟಡ ಮತ್ತು ಜಾಗವಿಲ್ಲದೆ ವಿವಿ ಕಾರ್ಯನಿರ್ವಹಿಸುತ್ತಿರುವುದು ಜಿಲ್ಲೆಯ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯದೊಂದಿಗೆ ಚೆಲ್ಲಾಟವಾಡಿದಂತಾಗಿದೆ ಎಂದು ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ.



**ಪ್ರಮುಖ ಬೇಡಿಕೆಗಳು :**

ಕೊಪ್ಪಳ ವಿಶ್ವವಿದ್ಯಾಲಯಕ್ಕೆ ತಕ್ಷಣವೇ ಸೂಕ್ತವಾದ ಸರ್ಕಾರಿ ನಿವೇಶನವನ್ನು ಗುರುತಿಸಿ ಮಂಜೂರು ಮಾಡಬೇಕು. ಸ್ವಂತ ಶಾಶ್ವತ ಕಟ್ಟಡ ನಿರ್ಮಾಣಕ್ಕೆ ಸರ್ಕಾರದಿಂದ ಅಗತ್ಯ ಅನುದಾನವನ್ನು ಶೀಘ್ರ ಬಿಡುಗಡೆ ಮಾಡಿಸಬೇಕು. ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕಾಲಮಿತಿಯೊಳಗೆ ಆರಂಭಿಸಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಬೇಕು. ತರಗತಿ ಕೊಠಡಿಗಳು, ಸುಸಜ್ಜಿತ ಪ್ರಯೋಗಾಲಯ, ಗ್ರಂಥಾಲಯ, ಆಡಳಿತ ಭವನ ಹಾಗೂ ವಿದ್ಯಾರ್ಥಿ ವಸತಿ ನಿಲಯ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಬೇಕು. ಭವಿಷ್ಯದ ವಿಸ್ತರಣೆ ಮತ್ತು ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಸಮಗ್ರ ಕ್ಯಾಂಪಸ್ ಯೋಜನೆಯನ್ನು ರೂಪಿಸಬೇಕು. ಜಿಲ್ಲಾಡಳಿತವು ಸರ್ಕಾರಕ್ಕೆ ಸ್ಪಷ್ಟ ಪ್ರಸ್ತಾವನೆ ಸಲ್ಲಿಸಿ ಅನುಮೋದನೆ ಹಾಗೂ ಅನುದಾನ ಕೊಡಿಸಬೇಕು. ನ್ಯಾಯಯುತ ಬೇಡಿಕೆಗಳನ್ನು ತಕ್ಷಣವೇ ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳನ್ನು ಒಗ್ಗೂಡಿಸಿ ಉಗ್ರ ಹೋರಾಟ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಸಂಚಾಲಕ ಹಮ್ಮಿಗೇಶ . ಹಾಗೂ ನಗರ ಕಾರ್ಯದರ್ಶಿ ಆದಿತ್ಯ ಹವಳೇ ರವರು ಜಂಟಿಯಾಗಿ ಸರಕಾರಕ್ಕೆಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಎಬಿವಿಪಿ ಪದಾಧಿಕಾರಿಗಳಾದ ಸುಮಂಗಳ ನಾಗರಾಜ್ ಮತ್ತು ಜಯಶ್ರೀ ಮೇದಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು,

## ಅ.20ರವರೆಗೆ ಎಚ್‌ಎಲ್‌ಸಿ ನಾಲೆಗೆ ನೀರು : ರೈತರು ಆತಂಕಪಡಬೇಡಿ ಎಂದ ಜೆ.ಎನ್.ಗಣೇಶ್

**ಧೃತಿ ನ್ಯೂಸ್ ಸುದ್ದಿ**

ಬಳ್ಳಾರಿಕಂಪ್ಲಿ: ರೈತರ ಬೆಳೆಗಳಿಗೆ ಸಮರ್ಪಕವಾಗಿ ನೀರೊದಗಿಸುವ ನಿಟ್ಟಿನಲ್ಲಿ ನೀರಾವರಿ ಸಚಿವರೊಂದಿಗೆ ಚರ್ಚಿಸಲಾಗಿದ್ದು, ಅಕ್ಟೋಬರ್ 20ರ ತನಕ ಎಚ್‌ಎಲ್‌ಸಿ (ಊಐಅ) ಕಾಲುವೆಗೆ ನೀರು ಹರಿಯಲಿದೆ. ಆದ್ದರಿಂದ ರೈತರು ಯಾವುದೇ ಕಾರಣಕ್ಕೂ ಆತಂಕಪಡುವ ಅಗತ್ಯವಿಲ್ಲ ಎಂದು ಶಾಸಕ ಜೆ.ಎನ್.ಗಣೇಶ್ ಭರವಸೆ ನೀಡಿದ್ದಾರೆ. ಎಚ್‌ಎಲ್‌ಸಿ ಭಾಗಕ್ಕೆ ನೀರು ಕಡಿತಗೊಳಿಸಲಾಗಿದೆ ಎಂದು ಅಂತರ್ಜಾಲದಲ್ಲಿ ಹರಿದಾಡುತ್ತಿರುವ ವಿಡಿಯೋ ಕುರಿತು



ಪ್ರತಿಕ್ರಿಯಿಸಿದ ಅವರು, "ರೈತರು ಇಂತಹ ವದಂತಿಗಳಿಗೆ ಕಿವಿಗೊಟ್ಟು ಆತಂಕಕ್ಕೊಳಗಾಗಬಾರದು. ರೈತರ ಪರವಾಗಿ ಶಕ್ತಿಮೀರಿ ಕೆಲಸ ಮಾಡಲು ನಾವು ಬದ್ಧರಾಗಿದ್ದೇವೆ" ಎಂದರು.

ಮೆಣಸಿನಕಾಯಿ ಬೆಳೆಯನ್ನು ಉಳಿಸಿಕೊಳ್ಳಲು ಡಿಸೆಂಬರ್ 15ರವರೆಗೆ ನೀರು ಬಿಡುವಂತೆ ರೈತರು ಮನವಿ ಮಾಡಿದ್ದಾರೆ. ಜಲಾಶಯದಲ್ಲಿ ನೀರಿನ ಲಭ್ಯತೆ ಇರುವವರೆಗೂ ರೈತರಿಗೆ ನೀರು ಕೊಡಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ಅಕ್ಟೋಬರ್ 20ರ ನಂತರ ಉನ್ನತ ಮಟ್ಟದ ಸಭೆ ನಡೆಸಿ, ಮುಂದಿನ ದಿನಗಳಲ್ಲಿ ನೀರು ಬಿಡುವ ಕುರಿತು ಸೂಕ್ತ ಚರ್ಚೆ ನಡೆಸಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಶಾಸಕರು ಸ್ಪಷ್ಟಪಡಿಸಿದರು. ರೈತರು ಸಹಕರಿಸಿದರೆ ಪ್ರತಿ ಹಂತದಲ್ಲೂ ಅವರ ಜೊತೆಗಿದ್ದು ಸಮರ್ಪಕವಾಗಿ ನೀರು ಹರಿಸಲಾಗುವುದು ಎಂದು ಅವರು ಹೇಳಿದರು.

**ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಎಸ್. ಐ. ಆರ್: 30,622 ನೋಟೀಸ್‌ಗಳ ವಿತರಣೆ**

## 30,081 ನೋಟೀಸ್ ಗಳ ವಿಚಾರಣೆ ಪೂರ್ಣ, ವಿವಿಧ ನಮೂನೆಯಲ್ಲಿ 1.97 ಲಕ್ಷ ಅರ್ಜಿಗಳ ಸಲ್ಲಿಕೆ : ಡಿಸಿ ಕವಿತಾ ಎಸ್. ಮನ್ನಿಕೇರಿ

**ಧೃತಿ ನ್ಯೂಸ್ ಸುದ್ದಿ**

ವಿಜಯನಗರ: ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಒಟ್ಟು 30,622 ನೋಟೀಸ್ ವಿತರಿಸಲಾಗಿದೆ. ಈ ಪೈಕಿ 30,081 ನೋಟೀಸ್‌ಗಳ ಸಂಬಂಧಿಸಿದಂತೆ ವಿಚಾರಣೆ ಪೂರ್ಣಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದರು. ಅವರು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಎಸ್. ಐ. ಆರ್ ಕುರಿತು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.



ಜಿಲ್ಲೆಯ ಐದು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಜೂನ್ 15ರಿಂದ ಸೆಪ್ಟೆಂಬರ್ 23 ರವರೆಗೆ ಮತದಾರರ ಪಟ್ಟಿ ಪರಿಷ್ಕರಣೆ ಸಂಬಂಧ ವಿವಿಧ ನಮೂನೆಗಳಲ್ಲಿ ಒಟ್ಟು 1,97,700 ಅರ್ಜಿಗಳು ಸಲ್ಲಿಕೆಯಾಗಿವೆ. ಇವುಗಳಲ್ಲಿ 1,48,593 ಅರ್ಜಿಗಳು ಆಫ್‌ಲೈನ್ ಮೂಲಕ ಹಾಗೂ 49,107 ಅರ್ಜಿಗಳು ಆನ್‌ಲೈನ್ ಮೂಲಕ ಸಲ್ಲಿಕೆಯಾಗಿವೆ. ನಮೂನೆ-6ರಲ್ಲಿ 10,046 ಅರ್ಜಿಗಳ ಅಂಗೀಕಾರ ಇದರಡಿ ಹೊಸ ಮತದಾರರ ನೋಂದಣಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಒಟ್ಟು 11,862 ಅರ್ಜಿಗಳು ಸಲ್ಲಿಕೆಯಾಗಿವೆ. ಈ ಪೈಕಿ 10,046 ಅರ್ಜಿಗಳನ್ನು ಅಂಗೀಕರಿಸಿ ಮತದಾರರ ಪಟ್ಟಿಯಲ್ಲಿ ನವೀಕರಿಸಲಾಗಿದೆ. 1,793 ಅರ್ಜಿಗಳು ತಿರಸ್ಕೃತಗೊಂಡಿದ್ದು, 23 ಅರ್ಜಿಗಳು ಬಾಕಿ ಉಳಿದಿವೆ. ಫಾರ್ಮ್ 7ರಡಿ1.49ಲಕ್ಷಅರ್ಜಿಗಳ ವಿಲೇವಾರಿ ಮತದಾರರ ಪಟ್ಟಿಯಲ್ಲಿನ ಹೆಸರುಗಳ ಅಳಿಸುವಿಕೆ ಹಾಗೂ ಆಕ್ಷೇಪಣೆಗಳಿಗೆ ಸಂಬಂಧಿಸಿದ ಫಾರ್ಮ್ 7ರಡಿ ಒಟ್ಟು 1,50,050 ಅರ್ಜಿಗಳು ಸಲ್ಲಿಕೆಯಾಗಿವೆ. ಇವುಗಳಲ್ಲಿ 1,49,463 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದ್ದು, 586 ಅರ್ಜಿಗಳು ತಿರಸ್ಕೃತಗೊಂಡಿವೆ. ಒಂದು ಅರ್ಜಿ ಮಾತ್ರ ಬಾಕಿ ಉಳಿದಿದೆ. ಫಾರ್ಮ್ 8ರಲ್ಲಿ 34,205 ಅರ್ಜಿಗಳ ನವೀಕರಣ ಮತದಾರರ ವಿವರಗಳ ತಿದ್ದುಪಡಿ ಹಾಗೂ ಇತರ ಬದಲಾವಣೆಗಳಿಗೆ ಸಂಬಂಧಿಸಿದ ಫಾರ್ಮ್ 8ರಡಿ 35,781 ಅರ್ಜಿಗಳು ಸಲ್ಲಿಕೆಯಾಗಿವೆ. ಈ ಪೈಕಿ 34,205 ಅರ್ಜಿಗಳನ್ನು ಮತದಾರರ ಪಟ್ಟಿಯಲ್ಲಿ ನವೀಕರಿಸಲಾಗಿದ್ದು, 1,536 ಅರ್ಜಿಗಳು ತಿರಸ್ಕೃತಗೊಳಿಸಲಾಗಿದ್ದು, 40 ಅರ್ಜಿಗಳು ಬಾಕಿ ಉಳಿದಿವೆ. ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಮುಂದುವರಿದಿದ್ದು, ಅರ್ಜಿಗಳ ವಿಲೇವಾರಿ ಮತ್ತು ವಿಚಾರಣೆ ಪ್ರಕ್ರಿಯೆಯ ಮೂಲಕ ಮತದಾರರ ಪಟ್ಟಿಯನ್ನು ಪರಿಷ್ಕರಿಸಲಾಗುತ್ತಿದೆ. ಅಕ್ಟೋಬರ್ 27 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದರು.

## 'ರಾಷ್ಟ್ರೀಯ ಹಾವು ಕಡಿತ ತಡೆಗಟ್ಟುವಿಕೆ ಮತ್ತು ನಿಯಂತ್ರಣ' : ಕಿನ್ನಾಳ ಗ್ರಾಮದಲ್ಲಿ ಜಾಗೃತಿ

**ಧೃತಿ ನ್ಯೂಸ್ ಸುದ್ದಿ**

ಕೊಪ್ಪಳ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೊಪ್ಪಳ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಘಟಕ ಹಾಗೂ ಕಿನ್ನಾಳ ಪ್ರಾಥಮಿಕ ಆರೋಗ್ಯ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಕಿನ್ನಾಳ ಗ್ರಾಮದಲ್ಲಿ ಮಂಗಳವಾರ "ರಾಷ್ಟ್ರೀಯ ಹಾವು ಕಡಿತ ತಡೆಗಟ್ಟುವಿಕೆ ಹಾಗೂ ನಿಯಂತ್ರಣ" ಕುರಿತು ಜಾಗೃತಿ ಕಾರ್ಯಕ್ರಮ ನಡೆಯಿತು.




ಕೊಪ್ಪಳ ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ ಕೆ. ಅವರು ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿ, ಹಾವು ಕಡಿತದಿಂದ ಸಂಭವಿಸುವ ಸಾವುಗಳನ್ನು ನಿಯಂತ್ರಿಸಲು ಸಾರ್ವಜನಿಕರಲ್ಲಿ ಸೂಕ್ತ ಅರಿವು ಅತ್ಯಗತ್ಯ ಎಂದು ತಿಳಿಸಿದರು. ಭಾರತದಲ್ಲಿ ನಾಗರಹಾವು, ಕಟ್ಟಾವು, ಕೊಳಕುಮಂಡಲ ಮತ್ತು ಗರಗಸ ಮಂಡಲ ಎಂಬ ನಾಲ್ಕು ಪ್ರಮುಖ ವಿಷಕಾರಿ ಹಾವುಗಳಿಂದ ಶೇ. 90ಕ್ಕೂ ಹೆಚ್ಚು ಸಾವುಗಳು ಸಂಭವಿಸುತ್ತವೆ. ನಾಗರಹಾವನ್ನು ಹೊರತುಪಡಿಸಿ ಉಳಿದ ಮೂರು ಹಾವುಗಳು ರಾತ್ರಿ ವೇಳೆಯಲ್ಲಿ ಹೆಚ್ಚು ಚುರುಕಾಗಿರುತ್ತವೆ. ಆದ್ದರಿಂದ ರಾತ್ರಿ ಹೊತ್ತು ಹೊರಹೋಗುವಾಗ ಕಡ್ಡಾಯವಾಗಿ ಟಾರ್ಚ್ ಬಳಸಬೇಕು ಎಂದು ಸಲಹೆ ನೀಡಿದರು.

ಹಾವುಗಳು ಆಕರ್ಷಿತವಾಗದಂತೆ ಮನೆ ಮತ್ತು ಅಂಗಳವನ್ನು ಇಲಿ, ಹೆಗ್ಗಣಗಳಿಂದ ಮುಕ್ತವಾಗಿಡಬೇಕು. ಕೃಷಿ ಜಮೀನು ಹಾಗೂ ಮನೆಯ ಸುತ್ತಲಿನ ಗಿಡಗಂಟಿಗಳನ್ನು ತೆರವುಗೊಳಿಸಿ ಸ್ವಚ್ಛವಾಗಿಟ್ಟುಕೊಳ್ಳುವುದು, ಹೊಲದಲ್ಲಿ ಕೆಲಸ ಮಾಡುವಾಗ ಪಾದರಕ್ಷೆಗಳನ್ನು (ಶೂ) ಧರಿಸುವುದು ಹಾಗೂ ಜಾನುವಾರುಗಳಿಗೆ ಹುಲ್ಲು ಕೊಯ್ಯುವಾಗ ಕುಡುಗೋಲು ಬಳಸುವುದು ಸುರಕ್ಷಿತ ಎಂದು ತಿಳಿಸಿದರು. ರಾತ್ರಿ ವೇಳೆ ಜಮೀನು ಅಥವಾ ಹೊರಗೆ ಮಲಗುವ ಸಂದರ್ಭ ಬಂದರೆ ನೆಲದ ಬದಲು ಮಂಚ ಬಳಸಬೇಕು, ನೆಲದಲ್ಲಿ ಮಲಗಲೇಬೇಕಾದಲ್ಲಿ ಸೊಳ್ಳೆಪರದೆ ಕಡ್ಡಾಯವಾಗಿ ಬಳಸಬೇಕು ಎಂದು ಮನವಿ ಮಾಡಿದರು.

ಹಾವು ಕಚ್ಚಿದ ತಕ್ಷಣ ಅನುಸರಿಸಬೇಕಾದ ಮುನ್ನೆಚ್ಚರಿಕೆಗಳನ್ನು ವಿವರಿಸುತ್ತಾ, ಹಾವು ಕಚ್ಚಿದ ವ್ಯಕ್ತಿಯನ್ನು ಗಾಬರಿಗೊಳಿಸದೆ ಸಮಾಧಾನಪಡಿಸಬೇಕು. ರಕ್ತಬಂಧಕ ಪಟ್ಟಿ (ಟೂರ್ನಿಕೆಟ್) ಕಟ್ಟುವುದು, ಗಾಯವನ್ನು ಬ್ಲೇಡ್‌ನಿಂದ ಕತ್ತರಿಸುವುದು ಅಥವಾ ನಾಟಿ ಔಷಧ ಮಾಡುವುದನ್ನು ಸಂಪೂರ್ಣವಾಗಿ ತ್ಯಜಿಸಬೇಕು. ಕಚ್ಚಿದ ಜಾಗವನ್ನು ಅಲುಗಾಡಿಸದೆ, ವ್ಯಕ್ತಿಯನ್ನು ಎಡಭಾಗಕ್ಕೆ ಮಲಗಿಸಿ, 40 ನಿಮಿಷಗಳ ಒಳಗಾಗಿ ಸಮೀಪದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಪರಶುರಾಮ್, ಕಾಂತರಾಜ್, ಆರೋಗ್ಯ ನಿರೀಕ್ಷಣಾಧಿಕಾರಿ ಬಸವರಾಜ್ ಗಾಳಿ, ಆಶಾ ಕಾರ್ಯಕರ್ತೆಯರು, ಇಲಾಖೆಯ ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಈ ನಮ್ಮ ಧೃತಿ ನ್ಯೂಸ್
E NAMMA DHURTHI NEWS
KANNADA DAILY NEWS PAPER

# ಮೋದಿ ಅವರು ಅನಧಿಕೃತ ತುರ್ತು ಪರಿಸ್ಥಿತಿಯನ್ನು ಹೇರುತ್ತಿದ್ದಾರೆ ; ಅಭಿಜಿತ್ ದೀಪ್ಕೆ

ನಾಗ್ಪುರ: ನವದೆಹಲಿಯ ಜಂತರ್ ಮಂತರ್ ಪ್ರದೇಶಕ್ಕೆ ಅನಧಿಕೃತವಾಗಿ ಪ್ರವೇಶಿಸಿದ ಆರೋಪದ ಮೇಲೆ ಕಾಕ್ರೊಚ್ ಜನತಾ ಪಾರ್ಟಿಯ (ಸಿಜೆಪಿ) ಇಬ್ಬರು ನಾಯಕರನ್ನು ಐದು ದಿನಗಳ ನ್ಯಾಯಾಂಗ ಬಂಧನಕ್ಕೆ ಕಳುಹಿಸಿದ ಬೆನ್ನಲ್ಲೇ, ಪ್ರಧಾನಿ ನರೇಂದ್ರ ಮೋದಿ ಅವರು ದೇಶದಲ್ಲಿ ಅನಧಿಕೃತ ತುರ್ತು ಪರಿಸ್ಥಿತಿಯನ್ನು ಹೇರುತ್ತಿದ್ದಾರೆ ಎಂದು ಪಕ್ಷದ ಸ್ಥಾಪಕ ಅಭಿಜಿತ್ ದೀಪ್ಕೆ ಆರೋಪಿಸಿದ್ದಾರೆ.

ನಾಗ್ಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಂತರ್ ಮಂತರ್‌ನಲ್ಲಿ ತ್ರಿವರ್ಣ ಧ್ವಜ ಹಾರಿಸುವ ಮೂಲಕ ಸಿಜೆಪಿ



ನಾಯಕರಾದ ಸೌರವ್ ದಾಸ್ ಮತ್ತು ಅಶುತೋಷ್ ರಂಕಾ ಯಾವ ಅಪರಾಧ ಎಸಗಿದ್ದಾರೆ ಎಂದು ಪ್ರಶ್ನಿಸಿದರು. ಶಾಂತಿ ಒಪ್ಪಂದದ (ಪೀಸ್ ಬಾಂಡ್) ನಿಯಮಗಳನ್ನು ಉಲ್ಲಂಘಿ–ಸಿದ ಹಾಗೂ ಪ್ರತಿಭಟನೆಗೆ ಅನುಮತಿಯಿಲ್ಲದ ಜಂತರ್ ಮಂತರ್ ಪ್ರದೇಶಕ್ಕೆ ಅನಧಿಕೃತವಾಗಿ ಪ್ರವೇಶಿಸಿದ ಆರೋಪದ ಮೇಲೆ ದಾಸ್ ಮತ್ತು ರಂಕಾ ಅವರನ್ನು ಐದು ದಿನಗಳ ನ್ಯಾಯಾಂಗ ಬಂಧನಕ್ಕೆ ಕಳುಹಿಸಿ, ದೆಹಲಿಯ ತಿಹಾರ್ ಜೈಲಿಗೆ ರವಾನಿಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಗ್ಯಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಘೋಷಣೆಗಳನ್ನು ಕೂಗುತ್ತಾ, ಬ್ಯಾ–ರಿಕೇಡ್‌ಗಳನ್ನು ದಾಟಿ ಅನುಮತಿಯಿಲ್ಲದೆ ಜಂತರ್ ಮಂತರ್ ಪ್ರದೇಶವನ್ನು ಪ್ರವೇಶಿಸಿದ ಆರೋಪದ ಮೇಲೆ ಅವರನ್ನು ನಿನ್ನೆ ಮುಂಜಾನೆ ವಶಕ್ಕೆ ಪಡೆಯಲಾಗಿತ್ತು. ಈ ಬೆಳವಣಿಗೆಗೆ ಪ್ರತಿಕ್ರಿಯಿಸಿದ ದೀಪ್ಕೆ, "ನರೇಂದ್ರ ಮೋದಿ ಅವರಿಗೆ ನಾನು ಹೇಳಲು ಬಯಸುವುದೇನೆಂದರೆ, ನೀವು ದೇಶದಲ್ಲಿ ತುರ್ತು ಪರಿಸ್ಥಿತಿಯನ್ನು ಹೇರಲು ಬಯಸಿದರೆ, ಅದನ್ನು ಅಧಿಕೃತವಾಗಿ ಘೋಷಿಸಿ. ಇದೇನು ಹೇಡಿಗಳಂತೆ ವರ್ತಿಸುವುದು? ಜಂತರ್ ಮಂತರ್‌ನಲ್ಲಿ ರಾಷ್ಟ್ರಧ್ವಜ ಹಾರಿಸಿದ್ದಕ್ಕಾಗಿ ಜನರನ್ನು ಐದು ದಿನಗಳ ಕಾಲ ಬಂಧನದಲ್ಲಿರಿಸುವ ಮೂಲಕ ಅನಧಿಕೃತ ತುರ್ತು ಪರಿಸ್ಥಿತಿಯನ್ನು ಹೇರುತ್ತಿದ್ದೀರಾ? 1975ರಲ್ಲಿ ಇಂದಿರಾ ಗಾಂಧಿ ತುರ್ತು ಪರಿಸ್ಥಿತಿ ಹೇರಿದ್ದಾಗಲೂ ಇಂತಹ ಘಟನೆ ನಡೆದಿರಲಿಲ್ಲ" ಎಂದು ಹೇಳಿದರು. "ಈ ದೇಶದಲ್ಲಿ ತ್ರಿವರ್ಣ ಧ್ವಜ ಹಾರಿಸುವುದು ಅತಿ ದೊಡ್ಡ ಅಪರಾಧವಾಗಿ ಪರಿಣಮಿಸಿದೆ. ಅದಕ್ಕಾಗಿ ಜನರನ್ನು ಐದು ದಿನಗಳ ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗುತ್ತಿದೆ. ನರೇಂದ್ರ ಮೋದಿ ಅವ–ರಿಗೆ ನಾನು ಹೇಳುವುದೇನೆಂದರೆ, ಅಷ್ಟು ದೊಡ್ಡ ಹೇಡಿಯಾಗಬೇಡಿ; ಸ್ವಲ್ಪ ಧೈರ್ಯ ತೋರಿಸಿ. ನೀವು ತುರ್ತು ಪರಿಸ್ಥಿತಿ ಹೇರಲು ಬಯಸಿದರೆ ಮತ್ತು ನಿಮ್ಮಲ್ಲಿ ಧೈರ್ಯವಿದ್ದರೆ, ಅದನ್ನು ಅಧಿಕೃತವಾಗಿ ಘೋಷಿಸಿ" ಎಂದು ಸವಾಲು ಹಾಕಿದರು. ಇದೇ ದಿನವಾದ 1956ರ ಅಕ್ಟೋಬರ್ 14ರಂದು ನಾಗ್ಪುರದಲ್ಲಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ತಮ್ಮ ಸಾವಿರಾರು ಅನುಯಾಯಿಗಳೊಂದಿಗೆ ಬೌದ್ಧ ಧರ್ಮವನ್ನು ಸ್ವೀಕರಿಸಿದ್ದರು. "ಇಂದು ನಾನು ಇಲ್ಲಿಯೇ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸುತ್ತಿದ್ದೇನೆ. ನಮ್ಮ ದೇಶವು ಸಂವಿಧಾನ ಮತ್ತು ಅಂಬೇಡ್ಕರ್ ಅವರ ವಿಚಾರಧಾರೆಗಳ ಆಧಾರದ ಮೇಲೆ ನಡೆಯುತ್ತಿದೆ. ನರೇಂದ್ರ ಮೋದಿ ಅಥವಾ ಇನ್ಯಾರೇ ಆಗಲಿ, ದೇಶದ ಮೇಲೆ ಆರ್‌ಎಸ್‌ಎಸ್ ಸಿದ್ಧಾಂತವನ್ನು ಹೇರಲು ಎಷ್ಟೇ ಪ್ರಯತ್ನಿಸಿದರೂ ಅದು ಸಾಧ್ಯವಾಗುವುದಿಲ್ಲ" ಎಂದು ಸಿಜೆಪಿ ಸ್ಥಾಪಕ ಅಭಿಜಿತ್ ದೀಪ್ಕೆ ದೃಢವಾಗಿ ಹೇಳಿದರು.

# ಮುಂದಿನ ವಾರ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಭಾರತ ಭೇಟಿ

ವಾಷಿಂಗ್ಟನ್: ಇಂಧನ ಸಹಕಾರವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಮುಂದಿನ ವಾರ ಭಾರತಕ್ಕೆ ಭೇಟಿ ನೀಡಲಿದ್ದಾರೆ ಎಂದು ಅಮೆರಿಕದ ವಿದೇಶಾಂಗ ಇಲಾಖೆ ತಿಳಿಸಿದೆ. ರೂಬಿಯೊ ಮೊದಲು ಉಜ್ಬೇಕಿಸ್ತಾನದ ಸಮರ್‌ಕಂಡ್‌ಗೆ ಭೇಟಿ ನೀಡಲಿದ್ದು, ಬಳಿಕ ಅಕ್ಟೋಬರ್ 17ರಿಂದ 22ರವರೆಗೆ ಭಾರತದ ಮುಂಬೈ ಮತ್ತು ಜಾಮ್‌ನಗರಕ್ಕೆ ಪ್ರಯಾಣಿಸಲಿದ್ದಾರೆ ಎಂದು ಇಲಾಖೆ ಹೇಳಿದೆ.



ನವದೆಹಲಿಯಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಆಯೋಜಿಸಿದ್ದ ಕ್ವಾಡ್ ವಿದೇಶಾಂಗ ಸಚಿವರ ಸಭೆಯಲ್ಲಿ ಭಾಗವಹಿಸಲು ಮೇ ತಿಂಗಳಲ್ಲಿ ಭಾರತಕ್ಕೆ ಭೇಟಿ ನೀಡಿದ್ದ ರೂಬಿಯೊ ಅವರ ಎರಡನೇ ಭಾರತ ಪ್ರವಾಸ ಇದಾಗಿದೆ. ಅಮೆರಿಕ–ಭಾರತ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವುದು, ಪ್ರಾದೇಶಿಕ ಮತ್ತು ಜಾಗತಿ–ಕ ವಿದ್ಯಮಾನಗಳ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಳ್ಳುವುದು ಹಾಗೂ ಇಂಧನ ಸಹಕಾರವನ್ನು ವಿಸ್ತರಿಸುವ ಸಾಧ್ಯತೆಗಳ ಕುರಿತು ಚರ್ಚಿಸುವ ಉದ್ದೇಶದಿಂದ ಅವರು ಹಿರಿಯ ಸರ್ಕಾರಿ ಅಧಿಕಾರಿಗಳನ್ನು ಭೇಟಿಯಾಗಲಿದ್ದಾರೆ ಎಂದು ವಿದೇಶಾಂಗ ಇಲಾಖೆ ತಿಳಿಸಿದೆ. ವಾಣಿಜ್ಯ ಹೂಡಿಕೆ ಮತ್ತು ಆರ್ಥಿಕ ಸಹಕಾರದ ಅವಕಾಶಗಳನ್ನು ಉತ್ತೇಜಿಸುವ ಉದ್ದೇಶದಿಂದ ರೂಬಿಯೊ ಉದ್ಯಮ ವಲಯದ ಪ್ರಮುಖರೊಂದಿಗೂ ಮಾತುಕತೆ ನಡೆಸಲಿದ್ದಾರೆ ಎಂದು ಇಲಾಖೆ ಹೇಳಿದೆ. ರೂಬಿಯೊ ಅವರ ಜಾಮ್‌ನಗರ ಭೇಟಿ ಮಹತ್ವದ್ದಾಗಿದೆ. ಇಲ್ಲಿ ರಿಲಯನ್ಸ್ ಇಂಡಸ್ಟ್ರೀಸ್‌ನ ತೈಲ ಸಂಸ್ಕರಣಾಗಾರವಿದ್ದು, ಇದು ದಿನಕ್ಕೆ 14 ಲಕ್ಷ ಬ್ಯಾರೆಲ್ ಕಚ್ಚಾ ತೈಲವನ್ನು ಸಂಸ್ಕರಿಸುವ ಸಾಮರ್ಥ್ಯ ಹೊಂದಿದೆ. ಇದು ವಿಶ್ವದ ಅತಿ–ದೊಡ್ಡ ಏಕ–ಸ್ಥಳದ ತೈಲ ಸಂಸ್ಕರಣಾ ಸಂಕೀರ್ಣವಾಗಿದೆ. ರಿಲಯನ್ಸ್ ಇಂಡಸ್ಟ್ರೀಸ್‌ನ ಹೂಡಿಕೆಯೊಂದಿಗೆ ಅಮೆರಿಕವು ಕಳೆದ 50 ವರ್ಷಗಳಲ್ಲಿ ತನ್ನ ಮೊದಲ ತೈಲ ಸಂಸ್ಕರಣಾಗಾರವನ್ನು ನಿರ್ಮಿಸಲಿದೆ ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಾರ್ಚ್‌ನಲ್ಲಿ ಘೋಷಿಸಿದ್ದರು. ಟೆಕ್ಸಾಸ್‌ನ ಬ್ರೌನ್ಸ್‌ವಿಲ್ಲೆಯಲ್ಲಿ 300 ಶತಕೋಟಿ ಅಮೆರಿಕನ್ ಡಾಲರ್ ವೆಚ್ಚದಲ್ಲಿ ಈ ಸಂಸ್ಕರಣಾಗಾರ ನಿರ್ಮಾಣವಾಗಲಿದೆ ಎಂದು ಟ್ರಂಪ್ ಹೇಳಿದ್ದರು. ಸಮರ್‌ಕಂಡ್‌ನಲ್ಲಿ ರೂಬಿಯೊ ಅವರು ಐದು ಮಧ್ಯ ಏಷ್ಯಾದ ದೇಶಗಳು ಮತ್ತು ಅಮೆರಿಕವನ್ನು ಒಳಗೊಂಡ 5+1 ಸಚಿವರ ಮಟ್ಟದ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಈ ರಾಜತಾಂತ್ರಿಕ ವೇದಿಕೆಯ ಮೂಲಕ ಕಾರ್ಯತಂತ್ರದ ಸಹಕಾರವನ್ನು ಬಲಪಡಿಸುವುದರಿಂದ ಅಮೆರಿಕ ಮತ್ತು ಮಧ್ಯ ಏಷ್ಯಾದ ದೇಶಗಳಿಗೆ ಶಾಂತಿಯುತ ಹಾಗೂ ಸಮೃದ್ಧ ಭವಿಷ್ಯವನ್ನು ರೂಪಿಸಲು ಹೇಗೆ ನೆರವಾಗಬಹುದು ಎಂಬುದನ್ನು ಅವರು ಸಭೆಯಲ್ಲಿ ಪ್ರಸ್ತಾಪಿಸಲಿದ್ದಾರೆ. ಅಲ್ಲದೆ, ಉಜ್ಬೇಕಿಸ್ತಾನ, ಕಜಕಿಸ್ತಾನ, ತಜಿಕಿಸ್ತಾನ, ತುರ್ಕಮೆನಿಸ್ತಾನ ಮತ್ತು ಕಿರ್ಗಿಜ್ ಗಣರಾಜ್ಯದ ಹಿರಿಯ ಅಧಿಕಾ–ರಿಗಳೊಂದಿಗೆ ದ್ವಿಪಕ್ಷೀಯ ಮಾತುಕತೆಗಳನ್ನೂ ನಡೆಸಲಿದ್ದಾರೆ. 200ಕ್ಕೂ ಹೆಚ್ಚು ಉದ್ಯಮ ಪ್ರಮುಖರನ್ನು ಒಳಗೊಂಡ ಅಮೆರಿಕದ ವಾಣಿಜ್ಯ ನಿಯೋಗವೂ ರೂಬಿಯೊ ಅವರೊಂದಿಗೆ ಇರಲಿದೆ. ಈ ಭೇಟಿಯು ಅಮೆ–ರಿಕ ಮತ್ತು ಮಧ್ಯ ಏಷ್ಯಾದ ದೇಶಗಳ ನಡುವಿನ ವಾಣಿಜ್ಯ ಸಹಕಾರವನ್ನು ಮತ್ತಷ್ಟು ಬಲಪಡಿಸುವ ನಿರೀಕ್ಷೆಯಿದೆ.

# ಮಮತಾ ಬ್ಯಾನರ್ಜಿ ಮೇಲೆ ಹಲ್ಲೆಗೆ ಯತ್ನ : ಮಹಿಳೆ ವಶಕ್ಕೆ, ಭದ್ರತಾ ಲೋಪದ ಆರೋಪ

ಕೋಲ್ಕತ್ತಾ: ಪಶ್ಚಿಮ ಬಂಗಾಳದ ಮಾಜಿ ಮುಖ್ಯಮಂತ್ರಿ ಹಾಗೂ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಅವರ ಮೇಲೆ ಹಲ್ಲೆಗೆ ಯತ್ನಿಸಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಕೋಲ್ಕತ್ತಾದ ಕಾಲಿಘಾಟ್‌ನಲ್ಲಿರುವ ಅವರ ನಿವಾಸದ ಹೊರಗೆ ಭದ್ರತಾ ಲೋಪ ಸಂಭವಿಸಿದೆ ಎಂದು ಟಿಎಂಸಿ ನಾಯಕರು ಆರೋಪಿಸಿದ್ದಾರೆ. ಮಮತಾ ಬ್ಯಾನರ್ಜಿ ಅವರು ಸಂಜೆ 6 ಗಂಟೆ ಸುಮಾ–ರಿಗೆ ಮನೆಯಿಂದ ಹೊರಬರುತ್ತಿದ್ದಾಗ ಮಹಿಳೆಯೊಬ್ಬರು ಚಾಕುವಿನಿಂದ ಹಲ್ಲೆ ನಡೆಸಲು ಯತ್ನಿಸಿದ್ದಾರೆ ಎಂದು ಟಿಎಂಸಿ ಮುಖಂಡರು ದೂರಿದ್ದಾರೆ.





ಪಕ್ಷದ ಪ್ರಧಾನ ಕಾರ್ಯದರ್ಶಿ ಡೋಲಾ ಸೇನ್ ಮತ್ತು ವಕ್ತಾರ ಸಾಕೇತ್ ಗೋಖಲೆ ಈ ಘಟನೆಯನ್ನು ಗಂಭೀರ ಭದ್ರತಾ ಲೋಪ ಹಾಗೂ ವ್ಯವಸ್ಥಿತ ಸಂಚು ಎಂದು ಬಣ್ಣಿಸಿದ್ದಾರೆ.ಬಂಧಿತ ಮಹಿಳೆಯನ್ನು ಅನುಸುವಾ ಸಹಾ ಎಂದು ಗುರುತಿಸಲಾಗಿದೆ. ಈಕೆ ಪಶ್ಚಿಮ ಬಂಗಾಳ ಪೊಲೀಸರ ಗುತ್ತಿಗೆ ಆಧಾರಿತ ಸಿವಿಕ್ ವಾಲಂಟಿಯರ್ ಆಗಿದ್ದಾಳೆ ಎಂದು ಹೇಳಲಾಗಿದೆ. ತಾನು ಮಮತಾ ಬ್ಯಾನರ್ಜಿ ಅವರ ಸೊಸೆ ಎಂದು ಆಕೆ ಹೇಳಿಕೊಂಡಿದ್ದಳು ಎನ್ನಲಾಗಿದೆ. ಮಮತಾ ಬ್ಯಾನರ್ಜಿ ಅವರು ಮನೆಯಿಂದ ಹೊರಬರುತ್ತಿದ್ದಾಗ ಮಹಿಳೆ ಅವಾಚ್ಯ ಶಬ್ದಗಳಿಂದ ನಿಂದಿಸಿ, ಚಾಕುವಿನಿಂದ ಹಲ್ಲೆ ನಡೆಸಲು ಯತ್ನಿಸಿದ್ದಳು ಎಂದು ಡೋಲಾ ಸೇನ್ ತಮ್ಮ ದೂರಿನಲ್ಲಿ ಆರೋಪಿಸಿದ್ದಾರೆ.

**ರಾಜಕೀಯ ಪಿತೂರಿಯ ಶಂಕೆ**

ಝಡ್–ಪ್ಲಸ್ ಭದ್ರತೆ ಹೊಂದಿರುವ ಮೂರು ಬಾರಿ ಮುಖ್ಯಮಂತ್ರಿಯಾಗಿದ್ದವರ ನಿವಾಸದ ಬಳಿ ಹರಿತವಾದ ಆಯುಧದೊಂದಿಗೆ ವ್ಯಕ್ತಿಯೊಬ್ಬರು ಬರಲು ಹೇಗೆ ಸಾಧ್ಯ ಎಂದು ಟಿಎಂಸಿ ವಕ್ತಾರ ಸಾಕೇತ್ ಗೋಖಲೆ ಪ್ರಶ್ನಿಸಿದ್ದಾರೆ. ದೆಹಲಿಯಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಹೋರಾಟ ನಡೆಸುತ್ತಿರುವ ಮಮತಾ ಬ್ಯಾನರ್ಜಿ ಅವರನ್ನು ಗುರಿಯಾಗಿಸಿಕೊಂಡು ಸಂಚು ರೂಪಿಸಲಾಗಿದೆಯೇ ಎಂಬ ಅನುಮಾನವನ್ನೂ ಅವರು ವ್ಯಕ್ತಪಡಿಸಿದ್ದಾರೆ.

**ಪೊಲೀಸರ ಹೇಳಿಕೆ**

ಮಾಜಿ ಮುಖ್ಯಮಂತ್ರಿ ಮನೆಯಿಂದ ಹೊರಬರುತ್ತಿದ್ದಾಗ ಅನುಸುವಾ ಸಹಾ (38) ಎಂಬ ಮಹಿಳೆ ಅವರ ಬಳಿ ಬಂದು ತೀವ್ರ ವಾಗ್ವಾದಕ್ಕಿಳಿದಿದ್ದಾಳೆ. ಕರ್ತವ್ಯದಲ್ಲಿದ್ದ ಪೊಲೀಸರು ತಕ್ಷಣವೇ ಆಕೆಯನ್ನು ವಶಕ್ಕೆ ಪಡೆದಿದ್ದಾರೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಎಫ್‌ಐಆರ್ ದಾಖಲಿಸಲಾಗಿದ್ದು, ಮಹಿಳೆಯ ಹಿನ್ನೆಲೆ ಮತ್ತು ಉದ್ದೇಶದ ಕುರಿತು ತನಿಖೆ ನಡೆಸಲಾಗುತ್ತಿದೆ. ಆಕೆ ಮಾನಸಿಕ ಆರೋಗ್ಯ ಸಮಸ್ಯೆಯಿಂದ ಬಳಲುತ್ತಿದ್ದಾಳೆಯೇ ಅಥ–ವಾ ಮಾದಕವಸ್ತು ಸೇವಿಸಿದ್ದಳೇ ಎಂಬ ಬಗ್ಗೆಯೂ ವಿಚಾರಣೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

2026ರ ಮೇ ತಿಂಗಳಲ್ಲಿ ನಡೆದ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಸತತ ಮೂರು ಅವಧಿಗಳ ಆಡಳಿತದ ಬಳಿಕ ಟಿಎಂಸಿ ಅಧಿಕಾರ ಕಳೆದುಕೊಂಡಿತ್ತು. ಇದರ ಬೆನ್ನಲ್ಲೇ ಪಕ್ಷದೊಳಗಿನ ಭಿನ್ನಾಭಿಪ್ರಾಯಗಳು ಹಾಗೂ ನಾಯಕರ ಮೇಲಿನ ದಾಳಿಗಳ ಆರೋಪಗಳು ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿವೆ. ಇದಕ್ಕೂ ಮೊದಲು, 2026ರ ಆಗಸ್ಟ್‌ನಲ್ಲಿ ಕೋಲ್ಕತ್ತಾದ ಶ್ಯಾಂಬಜಾರ್‌ನಲ್ಲಿ ಮಮತಾ ಬ್ಯಾನರ್ಜಿ ಅವರ ಕಾರಿನ ಮೇಲೆ ಕಲ್ಲು ತೂರಾಟ ನಡೆದಿತ್ತು ಎಂಬ ವರದಿಯೂ ಪ್ರಕಟವಾಗಿತ್ತು.

# 2ನೇ ದಿನಕ್ಕೆ ಕಾಲಿಟ್ಟ ಕಬ್ಬು ಬೆಳೆಗಾರರು ಹೆದ್ದಾರಿ ಬಂದ್ : ಉಗ್ರ ಹೋರಾಟದ ಎಚ್ಚರಿಕೆ

ಬೆಂಗಳೂರು: ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕಬ್ಬು ಬೆಳೆಗಾರರು ನಡೆಸುತ್ತಿರುವ ಹೆದ್ದಾರಿ ಬಂದ್ ಎರಡನೇ ದಿನಕ್ಕೆ ಕಾಲಿಟ್ಟಿದ್ದು, ಕೇಂದ್ರ ಸರ್ಕಾರ ತಕ್ಷಣ ಸ್ಪಂದಿಸದಿದ್ದರೆ, ಸಂಚಾರಕ್ಕೆ ನಿಗದಿಪಡಿಸಿರುವ ಪರ್ಯಾಯ ಮಾರ್ಗಗಳನ್ನೂ ಬಂದ್ ಮಾಸುವುದು ಮತ್ತು ರೈಲು ತಡೆ ನಡೆಸುವಂತಹ ಉಗ್ರ ಹೋರಾಟಕ್ಕೆ ಮುಂದಾಗುವುದಾಗಿ ರೈತರು ಎಚ್ಚರಿಕೆ ನೀಡಿದ್ದಾರೆ.

ಬೆಳಗಾವಿ ಜಿಲ್ಲೆಯ ಹಿರೇಬಾಗೇವಾಡಿ, ಚಿಕ್ಕೋಡಿ, ಹಾವೇರಿಯ ಬಂಕಾಪುರ, ಬಾಗಲಕೋಟೆ, ವಿಜಯಪುರ, ಗದಗ, ರಾಯಚೂರು ಸೇರಿದಂತೆ ಉತ್ತರ ಕರ್ನಾಟಕದ ಹಲವು ಕಡೆಗಳಲ್ಲಿ ರೈತರು ಹೆದ್ದಾರಿಗಳನ್ನು ಬಂದ್ ಮಾಡಿ ಪ್ರತಿಭಟನೆ ನಡೆಸುತ್ತಿದ್ದಾರೆ. ಹೆದ್ದಾರಿಗಳ ಮಧ್ಯಭಾಗದಲ್ಲಿ ಟೆಂಟ್‌ಗಳನ್ನು ನಿರ್ಮಿಸಿಕೊಂಡು ಹಗಲು–ರಾತ್ರಿ ಧರಣಿ ನಡೆಸುತ್ತಿರುವ ರೈತರು, ರಸ್ತೆಯಲ್ಲೇ ಅಡುಗೆ ಮಾಡಿ ಸಾಮೂಹಿಕ ಭೋಜನ ಮಾಡುತ್ತಿದ್ದಾರೆ. ರಾತ್ರಿ ಇಡೀ ಭಜನೆಗಳನ್ನು ನಡೆಸುವ ಮೂಲಕ ತಮ ಹೋರಾಟವನ್ನು ಮುಂದುವರಿಸಿದ್ದಾರೆ. ಇಂದು ಬೆಳಗ್ಗೆ ಹೆದ್ಧಾರಿಯಲ್ಲಿ ತಮಟೆ ಹೊಡೆದು, ಪೊರಕೆ ಹಿಡಿದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪ್ರತಿಭಟನೆ ತೀವ್ರಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಹೆದ್ದಾರಿಗಳಲ್ಲಿ ಹಾಲಿನ ಟ್ಯಾಂಕರ್‌ಗಳ ಸಂಚಾರಕ್ಕೂ ರೈತರು ಅಡ್ಡಿಪಡಿಸಿದ್ದಾರೆ. ಆರಂಭದಲ್ಲಿ ಅಗತ್ಯ ವಸ್ತುಗಳ ಸಾಗಣೆಗೆ ನೀಡಲಾಗಿದ್ದ ವಿನಾಯಿತಿಯೂ ಕ್ರಮೇಣ ಕಡಿಮೆಯಾಗುತ್ತಿರುವುದರಿಂದ ಜನಸಾಮಾನ್ಯರಿಗೆ ತೊಂದರೆಯಾಗುವ ಸಾಧ್ಯತೆ ಹೆಚ್ಚಾಗಿದೆ. ಮಹಾರಾಷ್ಟ್ರ ಮತ್ತು ತಮಿಳುನಾಡು ರಾಜ್ಯಗಳನ್ನು ಸಂಪರ್ಕಿಸುವ ಪ್ರಮುಖ ರಾಷ್ಟ್ರೀಯ ಹೆದ್ದಾರಿ ಸಂಪೂರ್ಣ ಬಂದ್ ಆಗಿರುವುದರಿಂದ ರಸ್ತೆಯುದ್ದಕ್ಕೂ ಭಾರಿ ವಾಹನಗಳು ಸಾಲುಗಟ್ಟಿ ನಿಂತಿವೆ. ಪ್ರವಾಸಿ ವಾಹನಗಳು ಹಾಗೂ ಲಘು ಸರಕು ಸಾಗಣೆ ವಾಹನಗಳ ಸಂಚಾರಕ್ಕೆ ಪೊಲೀಸರು ಪರ್ಯಾಯ ಮಾರ್ಗಗಳನ್ನು ಕಲ್ಪಿಸಿದ್ದಾರೆ. ಆದರೆ, ಕೇಂದ್ರ ಸರ್ಕಾರ ರೈತರ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಪರ್ಯಾಯ ಮಾರ್ಗಗಳನ್ನು ಬಂದ್ ಮಾಡಲಾಗುವುದು ಎಂದು ಎಚ್ಚರಿಸಿದ್ದಾರೆ. ನಾವು ಹೆದ್ಧಾರಿ ಬಂದ್ ಮಾಡಿದ್ದರೆ, ನಮದೇ ಹೊಲಗಳ ಮೇಲೆ ಪರ್ಯಾಯ ಸಂಚಾರ ವ್ಯವಸ್ಥೆ ಮಾಡಲಾಗಿದೆ. ನಮ ಜಮೀನುಗಳಿಗೆ ನೀರು ಹಾಯಿಸಿ, ಉಳುಮೆ ಮಾಡಿ, ವಾಹನಗಳ ಸಂಚಾರಕ್ಕೆ ಅಡ್ಡಿಪಡಿಸುವುದಾಗಿಯೂ ಎಚ್ಚರಿಕೆ ನಿಡಿದ್ದಾರೆ.ಈಗಾಗಲೇ ಹೆದ್ದಾರಿಗಳಲ್ಲಿ ವಾಹನ ಸಂಚಾರ ಸಂಪೂರ್ಣ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ, ರೈಲು ತಡೆಯ ಎಚ್ಚರಿಕೆಯೂ ಹೊರಬಿದ್ದಿರುವುದು ಸಂಚಾರ ವ್ಯವಸ್ಥೆಯ ಮೇಲೆ ಮತ್ತಷ್ಟು ಪರಿಣಾಮ ಬೀರುವ ಆತಂಕಕ್ಕೆ ಕಾರಣವಾಗಿದೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ರೈತರ ಹೋರಾಟವನ್ನು ಗಂಭೀರವಾಗಿ ಪರಿಗಣಿಸುತ್ತಿಲ್ಲ ಎಂದು ರೈತ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ತಮ ಬೇಡಿಕೆಗಳಿಗೆ ತಕ್ಷಣ ಸ್ಪಂದಿಸಬೇಕು. ಇಲ್ಲದಿದ್ದರೆ ಮುಂದಿನ ಹಂತದಲ್ಲಿ ರೈಲು ಸಂಚಾರವನ್ನು ತಡೆಹಿಡಿಯಲಾಗುವುದು ಎಂದು ಎಚ್ಚರಿಸಿದ್ದಾರೆ.



ರೈತ ಸಂಘದ ರಾಜ್ಯಾಧ್ಯಕ್ಷ ಚೂನಪ್ಪ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಕಬ್ಬಿಗೆ ನ್ಯಾಯಯುತ ಬೆಲೆ ನಿಗದಿಪಡಿಸದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಹೇಳಿದ್ದಾರೆ. ಮುಂದಿನ ಹಂತದಲ್ಲಿ ಮಹಿಳೆಯರೂ ಪ್ರತಿಭಟನೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ. ಪ್ರಲ್ಹಾದ್ ಜೋಶಿ ಅವರು ರೈತರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ವಿಫಲರಾಗಿದ್ದು, ಅವರು ರಾಜೀನಾಮೆ ನೀಡುವವರೆಗೂ ಹೋರಾಟದಿಂದ ಹಿಂದೆ ಸರಿಯುವುದಿಲ್ಲ ಎಂದು ಎಚ್ಚರಿಸಿದ್ದಾರೆ. ಗುಂಡು ಹಾರಿಸಿದರೂ ನಾವು ಹೆದರುವುದಿಲ್ಲ. ಪ್ರತಿ ಕೆಜಿ ಸಕ್ಕರೆಗೆ ಗರಿಷ್ಠ ಮಾರಾಟ ಬೆಲೆಯನ್ನು 60 ರೂಪಾಯಿಗೆ ನಿಗದಿಪಡಿಸಬೇಕು. ಆಗ ಕಬ್ಬಿಗೆ ಬೆಲೆ ಹೆಚ್ಚಾಗಲಿದೆ. ಎಫ್ ಆರ್ ಪಿ ಅಡಿ ಪ್ರತಿ ಟನ್ ಕಬ್ಬಿಗೆ 6,500 ರೂಪಾಯಿ ಬೆಲೆ ನೀಡಬೇಕು, ರಾಜ್ಯದಲ್ಲಿ ಉತ್ಪಾದನೆಯಾಗುವ ಎಥೆನಾಲ್ ಅನ್ನು ಶೇ.25ರಷ್ಟು ಮಾತ್ರ ಖರೀದಿಸಲಾಗುತ್ತಿದೆ. ಗುಜರಾತ್ ಹಾಗೂ ಇತರ ರಾಜ್ಯಗಳಲ್ಲಿ ಉತ್ಪಾದನೆಯಾಗುವ ಎಥೆನಾಲ್ ನಲ್ಲಿ ಬಹುಭಾಗವನ್ನು ಕೇಂದ್ರ ಸರ್ಕಾರ ಖರೀದಿಸುತ್ತಿದೆ. ಕರ್ನಾಟಕದಲ್ಲಿ ಉತ್ಪಾದನೆಯಾಗುವ ಎಥೆನಾಲ್ ಅನ್ನು ಶೇ.100ರಷ್ಟು ಕೇಂದ್ರ ಸರ್ಕಾರವೇ ನೇರವಾಗಿ ಖರೀದಿಸಬೇಕು ಎಂಬ ಬೇಡಿಕೆಗಳನ್ನು ಮುಂದಿಟ್ಟಿದ್ದಾರೆ.

ಈ ಬೇಡಿಕೆಗಳು ಈಡೇರಿದರೆ ಮಾತ್ರ ಪ್ರತಿಭಟನೆಯನ್ನು ಹಿಂಪಡೆಯಲಾಗುವುದು. ಇಲ್ಲದಿದ್ದರೆ ಜನಾಂದೋಲನವನ್ನು ಇನ್ನಷ್ಟು ತೀವ್ರಗೊಳಿಸಲಾಗುವುದು ಎಂದು ತಿಳಿಸಿದ್ದಾರೆ. ರಾಜ್ಯ ಸರ್ಕಾರ ಸಂಗ್ರಹಿಸುವ ತೆರಿಗೆಯಲ್ಲಿ ಪ್ರತಿ ಟನ್ ಕಬ್ಬಿಗೆ ಹೆಚ್ಚುವರಿಯಾಗಿ ಒಂದು ಸಾವಿರ ರೂಪಾಯಿ ನೀಡಬೇಕು ಎಂಬ ಬೇಡಿಕೆಯನ್ನೂ ರೈತರು ಮುಂದಿಟ್ಟಿದ್ದಾರೆ. ಕಬ್ಬಿನ ತೂಕದಲ್ಲಿ ನಡೆಯುತ್ತಿರುವ ವಂಚನೆಯನ್ನು ತಡೆಯಲು 500 ಕೋಟಿ ರೂಪಾಯಿಗಳನ್ನು ಮೀಸಲಿಡಬೇಕು. ರೈತ–ರಿಗೆ ತ್ರಿಫೇಸ್ ವಿದ್ಯುತ್ ಪೂರೈಕೆಯನ್ನು ಸಮರ್ಪಕವಾಗಿ ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ.

ಪ್ರತಿಭಟನಾ ನಿರತ ರೈತ ಮುಖಂಡರು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದು, ರೈತರ ಬೇಡಿಕೆಗಳಿಗೆ ಸ್ಪಂದಿಸಲು ಸಾಧ್ಯವಾಗದಿದ್ದರೆ ಆ ಹುದ್ದೆಯಲ್ಲಿ ಮುಂದುವರಿಯುವುದರಿಂದ ಏನು ಪ್ರಯೋಜನ ಎಂದು ಪ್ರಶ್ನಿಸಿದ್ದಾರೆ. ರಾಜೀನಾಮೆ ನೀಡಿ ಮನೆಗೆ ತೆರಳಲಿ ಎಂದು ಸವಾಲು ಹಾಕಿದ್ದಾರೆ.ಯಾವುದೇ ಕಾರಣಕ್ಕೂ ಬೇಡಿಕೆಗಳು ಈಡೇರುವವರೆಗೆ ಪ್ರತಿಭಟನೆಯನ್ನು ಹಿಂಪಡೆಯುವುದಿಲ್ಲ. ರೈತರ ಹೋರಾಟವನ್ನು ಹಗುರವಾಗಿ ಪರಿಗಣಿಸಿದರೆ ಅದರ ಪರಿಣಾಮ ಇನ್ನಷ್ಟು ತೀವ್ರವಾಗಲಿದೆ ಎಂದು ರೈತ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

# ನೀಟ್ ಪತ್ರಿಕೆ ಸೋರಿಕೆ ಪ್ರಕರಣ : ಸಿಬಿಐ ಪೂರಕ ಆರೋಪಪಟ್ಟಿ ಸಲ್ಲಿಕೆ , ಸರ್ಕಾರಿ ಅಧಿಕಾರಿಗಳಿಗೆ ಕ್ಲೀನ್‌ಚಿಟ್

ನವದೆಹಲಿ: ನೀಟ್–ಯುಜಿ 2026 ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದ ತನಿಖೆಯಲ್ಲಿ ಯಾವುದೇ ಸರ್ಕಾರಿ ಅಥವಾ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಅಧಿಕಾರಿಯ ವಿರುದ್ಧ ನೇರವಾದ ಅಥವಾ ದೃಢವಾದ ಯಾವುದೇ ಪುರಾವೆಗಳು ಲಭ್ಯವಾಗಿಲ್ಲ ಎಂದು ಸಿಬಿಐ ಸ್ಪಷ್ಟಪಡಿಸಿದೆ.

ದೆಹಲಿ ನ್ಯಾಯಾಲಯಕ್ಕೆ ಸಲ್ಲಿಸಲಾಗಿರುವ ಇತ್ತೀಚಿನ ಪೂರಕ ಆರೋಪಪಟ್ಟಿಯಲ್ಲಿ ಹೆಚ್ಚುವರಿಯಾಗಿ ಒಬ್ಬ ಖಾಸಗಿ ವ್ಯಕ್ತಿಯ ಹೆಸರನ್ನು ಮಾತ್ರ ಸೇ–ರಿಸಲಾಗಿದ್ದು, ಇದರೊಂದಿಗೆ ಪ್ರಕರಣದ ತನಿಖೆ ಮುಕ್ತಾಯಗೊಂಡಂತಾಗಿದೆ.ಜುಲೈ 28ರಂದು ಸಲ್ಲಿಸಲಾಗಿದ್ದ ಮೊದಲ ಚಾರ್ಜ್‌ಶೀಟ್‌ನಲ್ಲಿ ಎನ್‌ಟಿಎ ನೇಮಿಸಿದ್ದ ಮೂವರು ವಿಷಯ ತಜ್ಞರು, ಮಧ್ಯವರ್ತಿಗಳು ಹಾಗೂ ತರಬೇತಿ ಕೇಂದ್ರಗಳ ಪ್ರತಿನಿಧಿಗಳು ಸೇರಿದಂತೆ ಒಟ್ಟು 13 ಜನರನ್ನು ಹೆಸರಿಸಲಾಗಿತ್ತು. ಮೇ 3ರಂದು ನಡೆದಿದ್ದ ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆಯಲ್ಲಿ ಸೋ–ರಿಕೆಯ ಶಂಕೆ ವ್ಯಕ್ತವಾದ ಹಿನ್ನೆಲೆಯಲ್ಲಿ, ಮೇ 12 ರಂದು ಎನ್‌ಟಿಎ ಪರೀಕ್ಷೆಯನ್ನು ರದ್ದುಗೊಳಿಸಿತ್ತು. ಈ ಹಗರಣವು ದೇಶಾದ್ಯಂತ ದೊಡ್ಡ ಮಟ್ಟದ ಪ್ರತಿಭಟನೆಗಳಿಗೆ ಹಾಗೂ ರಾಜಕೀಯ ಬೆಳವಣಿಗೆಗಳಿಗೆ ಕಾರಣವಾಗಿತ್ತು. ಪ್ರಶ್ನೆಪತ್ರಿಕೆಯಲ್ಲಿ 120 ಪ್ರಶ್ನೆಗಳು ಹೊಂದಾಣಿಕೆ

ಮೇ 3ರಂದು ನಡೆದಿದ್ದ ನೀಟ್–ಯುಜಿ




2026 ಪರೀಕ್ಷೆಯ ಪ್ರಶ್ನೆಪತ್ರಿಕೆಯಲ್ಲಿ, ವಿಷಯ ತಜ್ಞರು ಮತ್ತು ಶಿಕ್ಷಕರು ಹಿಂದಿನ ವರ್ಷಗಳ ಪರೀಕ್ಷಾ ಮಾದರಿಗಳನ್ನು ಆಧರಿಸಿ ಸಿದ್ಧಪಡಿಸಿದ್ದ ಊಹಾತಕ ಪ್ರಶ್ನೆಪತ್ರಿಕೆಯ ಕನಿಷ್ಠ 120 ಪ್ರಶ್ನೆಗಳು ಹೊಂದಾಣಿಕೆಯಾಗಿದ್ದವು ಎಂಬುದು ವಿವಾದಕ್ಕೆ ಕಾರಣವಾಗಿತ್ತು. ಈ ಬೆಳವಣಿಗೆಯ ಬೆನ್ನಲ್ಲೇ ಮೇ 12ರಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ನೀಟ್–ಯುಜಿ 2026 ಪರೀಕ್ಷೆಯನ್ನು ರದ್ದುಗೊಳಿಸುವುದಾಗಿ ಘೋಷಿಸಿತ್ತು. ಪರೀಕ್ಷೆ ನಡೆದ ಸುಮಾರು ಒಂದು ವಾರದ ಬಳಿಕ ಸೋ–ರಿಕೆ ಪ್ರಕರಣ ಬೆಳಕಿಗೆ ಬಂದಿದ್ದು, ದೇಶಾದ್ಯಂತ ವಿದ್ಯಾರ್ಥಿಗಳು ಮತ್ತು ಪೋಷಕರಲ್ಲಿ ತೀವ್ರ ಆತಂಕ ಮೂಡಿಸಿತ್ತು.

**ಪ್ರತಿಧ್ವನಿಸಿದ ವಿವಾದ**

ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ಸಂಸತ್ತಿನಲ್ಲೂ ಭಾರಿ ಚರ್ಚೆಗೆ ಕಾರಣವಾಗಿತ್ತು. ಪರೀಕ್ಷಾ ವ್ಯವಸ್ಥೆಯ ಪಾರದರ್ಶಕತೆ, ವಿದ್ಯಾರ್ಥಿಗಳ ಭವಿಷ್ಯ ಮತ್ತು ಪರೀಕ್ಷಾ ಸಂಸ್ಥೆಗಳ ಹೊಣೆಗಾರಿಕೆ ಕುರಿತು ವಿರೋಧ ಪಕ್ಷಗಳು ಕೇಂದ್ರ ಸರ್ಕಾರವನ್ನು ಪ್ರಶ್ನಿಸಿದ್ದವು. ಪ್ರಕರಣದ ಹಿನ್ನೆಲೆಯಲ್ಲಿ ಆಗಿನ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೂ ಒತ್ತಾಯಗಳು ಕೇಳಿಬಂದಿದ್ದವು. ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯಕ್ಕೆ ಸಂಬಂಧಿಸಿದ ಈ ಪ್ರಕರಣವು ಪರೀಕ್ಷಾ ವ್ಯವಸ್ಥೆಯ ವಿಶ್ವಾಸಾರ್ಹತೆ ಕುರಿತು ಗಂಭೀರ ಪ್ರಶ್ನೆಗಳನ್ನು ಎತ್ತಿತ್ತು. ಇದೀಗ ಸಿಬಿಐ ಪೂರಕ ಆರೋಪಪಟ್ಟಿ ಸಲ್ಲಿಸಿರುವುದರಿಂದ ತನಿಖೆಯ ಪ್ರಮುಖ ಹಂತವೊಂದು ಪೂರ್ಣಗೊಂಡಿದೆ. ಆದಾಗ್ಯೂ, ಪ್ರಕರಣದ ಅಂತಿಮ ಕಾನೂನುಬದ್ಧ ನಿರ್ಣಯ ನ್ಯಾಯಾಲಯದ ವಿಚಾರಣೆ ಮತ್ತು ಲಭ್ಯವಿರುವ ಸಾಕ್ಷ್ಯಾಧಾರಗಳನ್ನು ಅವಲಂಬಿಸಿರುತ್ತದೆ. ವಿದ್ಯಾರ್ಥಿಗಳಿಗೆ ನ್ಯಾಯ ದೊರೆಯುವುದು, ಪರೀಕ್ಷಾ ವ್ಯವಸ್ಥೆಯಲ್ಲಿನ ಲೋಪಗಳಿಗೆ ಹೊಣೆಗಾರಿಕೆಯನ್ನು ನಿಗದಿಪಡಿಸುವುದು ಮತ್ತು ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಕ್ರಮ ಕೈಗೊಳ್ಳುವುದು ಈಗಲೂ ಪ್ರಮುಖ ಸವಾಲುಗಳಾಗಿವೆ.

ಇದೇ ಸಂದರ್ಭದಲ್ಲಿ, ಪ್ರಶ್ನೆಪತ್ರಿಕೆ ಸೋರಿಕೆಯಂತಹ ಘಟನೆಗಳನ್ನು ತಡೆಯಲು ಪರೀಕ್ಷಾ ವ್ಯವಸ್ಥೆಯಲ್ಲಿ ಮೂಲಭೂತ ಬದಲಾವಣೆಗಳನ್ನು ತರಬೇಕೆಂಬ ಒತ್ತಾಯವೂ ಹೆಚ್ಚಾಗಿದೆ. ಪ್ರಶ್ನೆಪತ್ರಿಕೆಗಳನ್ನು ಕೊನೆಯ ಕ್ಷಣದಲ್ಲಿ ಸಿದ್ಧಪಡಿಸುವುದು, ಸುರಕ್ಷಿತ ಪ್ರಶ್ನೆಬ್ಯಾಂಕ್‌ಗಳನ್ನು ರೂಪಿಸುವುದು ಮತ್ತು ಕಂಪ್ಯೂಟರ್ ಆಧಾರಿತ ಪರೀಕ್ಷಾ ವ್ಯವಸ್ಥೆಯನ್ನು ವಿಸ್ತರಿಸುವುದು ಸೇ–ರಿದಂತೆ ಹಲವು ಸುಧಾರಣಾ ಕ್ರಮಗಳ ಕುರಿತು ಚರ್ಚೆ ನಡೆಯುತ್ತಿದೆ.

ಸಿಬಿಐ ಪೂರಕ ಆರೋಪಪಟ್ಟಿಯಲ್ಲಿ ಸರ್ಕಾರಿ ಅಥವಾ ಎನ್‌ಟಿಎ ಅಧಿಕಾರಿಗಳ ಹೆಸರು ಇಲ್ಲದಿರುವುದು ತನಿಖೆಯ ಪ್ರಮುಖ ಬೆಳವಣಿಗೆಯಾಗಿದೆ. ಆದರೆ ವಿದ್ಯಾರ್ಥಿಗಳ ಆತಂಕ ನಿವಾರಣೆಯಾಗಲು, ಹೊಣೆಗಾರಿಕೆ ಸ್ಪಷ್ಟವಾಗಲು ಮತ್ತು ಪರೀಕ್ಷಾ ವ್ಯವಸ್ಥೆಯ ಮೇಲಿನ ವಿಶ್ವಾಸ ಮರಳಲು ನ್ಯಾಯಾಲಯದ ಮುಂದಿನ ಪ್ರಕ್ರಿಯೆ ಹಾಗೂ ಸುಧಾರಣಾ ಕ್ರಮಗಳು ನಿರ್ಣಾಯಕವಾಗಲಿವೆ.

# ಹಸು ರೈತನ ಬದುಕಿನ ಅವಿಭಾಜ್ಯ ಅಂಗ

ಹಸು ನಮ್ಮ ದೇಶದ ಗ್ರಾಮೀಣ ಬದುಕಿನೊಂದಿಗೆ ಶತಮಾನಗಳಿಂದ ಬೆಸೆದುಕೊಂಡಿರುವ ಪ್ರಮುಖ ಸಾಕುಪ್ರಾಣಿಗಳಲ್ಲಿ ಒಂದಾಗಿದೆ. ವಿಶೇಷವಾಗಿ ಕೃಷಿಯನ್ನೇ ಜೀವನಾಧಾರವಾಗಿಸಿಕೊಂಡಿರುವ ರೈತ ಕುಟುಂಬಗಳಲ್ಲಿ ಹಸುವಿಗೆ ವಿಶೇಷ ಸ್ಥಾನವಿದೆ. ಹಸು ಕೇವಲ ಹಾಲು ನೀಡುವ ಪ್ರಾಣಿಯಲ್ಲ; ಅದು ರೈತನ ಕುಟುಂಬದ ಆರ್ಥಿಕತೆ, ಕೃಷಿ ಚಟುವಟಿಕೆ, ಗ್ರಾಮೀಣ ಸಂಸ್ಕೃತಿ ಮತ್ತು ಜೀವನಶೈಲಿಯೊಂದಿಗೆ ನಿಕಟ ಸಂಬಂಧ ಹೊಂದಿರುವ ಜೀವಿ. ಭಾರತದ ಹಳ್ಳಿಗಳಲ್ಲಿ ಬೆಳಗಿನ ದಿನಚರಿ ಆರಂಭವಾಗುವುದೇ ಅನೇಕ ಮನೆಗಳಲ್ಲಿ ಹಸುಗಳ ಆರೈಕೆಯಿಂದ. ಹಸುಗಳಿಗೆ ಮೇವು, ನೀರು ನೀಡುವುದು, ಕೊಟ್ಟಿಗೆಯನ್ನು ಸ್ವಚ್ಛಗೊಳಿಸುವುದು, ಹಾಲು ಕರೆಯುವುದು ಮುಂತಾದ ಕೆಲಸಗಳು ಗ್ರಾಮೀಣ ಕುಟುಂಬಗಳ ದಿನನಿತ್ಯದ ಬದುಕಿನ ಭಾಗವಾಗಿವೆ. ರೈತನು ತನ್ನ ಜಾನುವಾರುಗಳನ್ನು ಮನೆಯ ಸದಸ್ಯರಂತೆ ಪ್ರೀತಿಯಿಂದ ನೋಡಿಕೊಳ್ಳುತ್ತಾನೆ.

**ಹಾಲು ಪೌಷ್ಟಿಕ ಆಹಾರದ ಪ್ರಮುಖ ಮೂಲ**

ಹಸುವಿನಿಂದ ದೊರೆಯುವ ಹಾಲು ನಮ್ಮ ಆಹಾರ ಪದ್ಧತಿಯಲ್ಲಿ ಪ್ರಮುಖ ಸ್ಥಾನ ಪಡೆದಿದೆ. ಹಾಲಿನಲ್ಲಿ ದೇಹಕ್ಕೆ ಅಗತ್ಯವಾದ ಹಲವು ಪೋಷಕಾಂಶಗಳು ಇರುತ್ತವೆ. ಮಕ್ಕಳು, ವಯಸ್ಕರು ಹಾಗೂ ವೃದ್ಧರು ತಮ್ಮ ಆಹಾರ ಪದ್ಧತಿಗೆ ಅನುಗುಣವಾಗಿ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಸೇವಿಸುತ್ತಾರೆ. ಹಾಲಿನಿಂದ ಮೊಸರು, ಮಜ್ಜಿಗೆ, ಬೆಣ್ಣೆ, ತುಪ್ಪ, ಪನ್ನೀರ್ ಸೇರಿದಂತೆ ಹಲವು ಆಹಾರ ಪದಾರ್ಥಗಳನ್ನು ತಯಾರಿಸಲಾಗುತ್ತದೆ. ಹೀಗಾಗಿ ಹಸು ಹಾಲಿನ ಮೂಲಕ ಒಂದು ಕುಟುಂಬದ ಆಹಾರ ಮತ್ತು ಜೀವನೋಪಾಯ ಎರಡಕ್ಕೂ ಸಹಕಾರ ನೀಡುತ್ತದೆ. ರೈತನಿಗೆ ನಿರಂತರ ಆದಾಯದ ಮೂಲ ಕೃಷಿ ಆದಾಯವು ಮಳೆ, ಹವಾಮಾನ, ಬೆಳೆ ಬೆಲೆ ಹಾಗೂ ಮಾರುಕಟ್ಟೆಯ ಪರಿಸ್ಥಿತಿಗಳ ಮೇಲೆ ಅವಲಂಬಿತವಾಗಿರುತ್ತದೆ. ಕೆಲವೊಮ್ಮೆ ಬೆಳೆ ಕೈಕೊಟ್ಟಾಗ ರೈತರು ಆರ್ಥಿಕ ಸಂಕಷ್ಟ ಎದುರಿಸಬೇಕಾಗುತ್ತದೆ. ಇಂತಹ ಸಂದರ್ಭದಲ್ಲಿ ಹೈನುಗಾರಿಕೆ ರೈತ ಕುಟುಂಬಕ್ಕೆ ಹೆಚ್ಚುವರಿ ಆದಾಯದ ಮಾರ್ಗವಾಗುತ್ತದೆ. ಹಸುಗಳಿಂದ ಪ್ರತಿದಿನ ಹಾಲು ದೊರೆಯುವುದರಿಂದ ಅದನ್ನು ಸ್ಥಳೀಯ ಹಾಲು ಸಂಗ್ರಹ ಕೇಂದ್ರಗಳು ಅಥವಾ ಹಾಲು ಉತ್ಪಾದಕರ ಸಂಘಗಳಿಗೆ ಮಾರಾಟ ಮಾಡಿ ರೈತರು ನಿಯಮಿತ ಆದಾಯ ಗಳಿಸಬಹುದು. ಈ ಆದಾಯವನ್ನು ಕುಟುಂಬದ ದಿನನಿತ್ಯದ ಖರ್ಚು, ಮಕ್ಕಳ ಶಿಕ್ಷಣ, ಕೃಷಿ ವೆಚ್ಚ ಹಾಗೂ ಜಾನುವಾರುಗಳ ಆರೈಕೆಗೆ ಬಳಸಿಕೊಳ್ಳಬಹುದು. ಮಹಿಳೆಯರ ಸ್ವಾವಲಂಬನೆಗೆ ಸಹಕಾರಿ ಗ್ರಾಮೀಣ ಪ್ರದೇಶಗಳಲ್ಲಿ ಹೈನುಗಾರಿಕೆಯಲ್ಲಿ ಮಹಿಳೆಯರ ಪಾತ್ರ ಬಹಳ ದೊಡ್ಡದು. ಮನೆಯಲ್ಲಿರುವ ಹಸುಗಳ ಆರೈಕೆ, ಮೇವು ನೀಡುವುದು, ಹಾಲು ಕರೆಯುವುದು ಹಾಗೂ ಹಾಲನ್ನು ಸಂಗ್ರಹ ಕೇಂದ್ರಕ್ಕೆ ತಲುಪಿಸುವಂತಹ ಕೆಲಸಗಳಲ್ಲಿ ಮಹಿಳೆಯರು



ಸಕ್ರಿಯವಾಗಿ ತೊಡಗಿಸಿಕೊಂಡಿರುತ್ತಾರೆ. ಇದರ ಮೂಲಕ ಮಹಿಳೆಯರಿಗೆ ಮನೆಯಲ್ಲಿಯೇ ಆದಾಯ ಗಳಿಸುವ ಅವಕಾಶ ಸಿಗುತ್ತದೆ. ಸ್ವಸಹಾಯ ಸಂಘಗಳು ಮತ್ತು ಹಾಲು ಉತ್ಪಾದಕರ ಸಂಘಗಳೊಂದಿಗೆ ಸಂಪರ್ಕ ಹೊಂದುವ ಮೂಲಕ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾಗಲು ಹೈನುಗಾರಿಕೆ ನೆರವಾಗಬಹುದು.

**ಕೃಷಿಗೂ ಹಸುವಿನ ಕೊಡುಗೆ**

ಹಸುವಿನ ಕೊಟ್ಟಿಗೆಯಿಂದ ದೊರೆಯುವ ಸಗಣಿ ಕೃಷಿಗೆ ಉತ್ತಮ ಸಾವಯವ ಸಂಪನ್ಮೂಲವಾಗಿದೆ. ಸಗಣಿಯನ್ನು ಸಂಗ್ರಹಿಸಿ ಕಾಂಪೋಸ್ಟ್ ಅಥವಾ ಸಾವಯವ ಗೊಬ್ಬರವಾಗಿ ಬಳಸಬಹುದು. ಇದರಿಂದ ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳಲು ಸಹಾಯವಾಗುತ್ತದೆ. ರಾಸಾಯನಿಕ ಗೊಬ್ಬರಗಳ ಬಳಕೆಯನ್ನು ಕಡಿಮೆ ಮಾಡಿ ಸಾವಯವ ಕೃಷಿಯತ್ತ ಸಾಗಲು ಬಯಸುವ ರೈತರಿಗೆ ಜಾನುವಾರು ಸಾಕಾಣಿಕೆ ಹೆಚ್ಚು ಸಹಾಯಕವಾಗುತ್ತದೆ. ಹೊಲ ಮತ್ತು ಕೊಟ್ಟಿಗೆಯನ್ನು ಪರಸ್ಪರ ಸಂಬಂಧಿಸುವ ಮೂಲಕ ರೈತರು ತಮ್ಮ ಕೃಷಿ ವ್ಯವಸ್ಥೆಯನ್ನು ಮತ್ತಷ್ಟು ಸುಸ್ಥಿರವಾಗಿಸಿಕೊಳ್ಳಬಹುದು.

**ಪರಿಸರ ಸ್ನೇಹಿ ಹೈನುಗಾರಿಕೆ**

ಹೈನುಗಾರಿಕೆಯನ್ನು ವೈಜ್ಞಾನಿಕವಾಗಿ ನಡೆಸಿದರೆ ಪರಿಸರಕ್ಕೂ ಹಲವು ರೀತಿಯಲ್ಲಿ ಪ್ರಯೋಜನವಾಗಬಹುದು. ಸಗಣಿ ಮತ್ತು ಇತರ ಜೈವಿಕ ತ್ಯಾಜ್ಯಗಳನ್ನು ಸರಿಯಾಗಿ ನಿರ್ವಹಿಸುವುದರಿಂದ ಅವುಗಳನ್ನು ಗೊಬ್ಬರ ಅಥವಾ ಜೈವಿಕ ಅನಿಲದಂತಹ ಉಪಯುಕ್ತ ಸಂಪನ್ಮೂಲಗಳಾಗಿ ಪರಿವರ್ತಿಸಬಹುದು. ಹೀಗಾಗಿ ಜಾನುವಾರು ಸಾಕಾಣಿಕೆಯನ್ನು ಕೇವಲ ಆದಾಯ ಗಳಿಸುವ ಉದ್ಯಮವಾಗಿ ನೋಡದೆ, ಕೃಷಿ, ಪಶುಪಾಲನೆ ಮತ್ತು ಪರಿಸರ ಸಂರಕ್ಷಣೆಯನ್ನು ಒಟ್ಟುಗೂಡಿಸುವ ಸಮಗ್ರ ವ್ಯವಸ್ಥೆಯಾಗಿ ಬೆಳೆಸುವುದು ಉತ್ತಮ. ಹಸುವಿನ ಆರೋಗ್ಯದ ಬಗ್ಗೆ ಕಾಳಜಿ ಅಗತ್ಯ ಉತ್ತಮ ಜಾನುವಾರು ನಿರ್ವಹಣೆ, ಸೂಕ್ತ ಸಂತಾನೋತ್ಪತ್ತಿ ವಿಧಾನಗಳು ಮತ್ತು ಪಶುವೈದ್ಯಕೀಯ ಸೇವೆಗಳ ಮೂಲಕ ಹೈನುಗಾರಿಕೆಯ ಗುಣಮಟ್ಟವನ್ನು ಹೆಚ್ಚಿಸಬಹುದು. ಸ್ಥಳೀಯ ತಳಿಗಳ ಸಂರಕ್ಷಣೆಯ ಜೊತೆಗೆ ರೈತರಿಗೆ ವೈಜ್ಞಾನಿಕ ಪಶುಪಾಲನಾ ತರಬೇತಿ ನೀಡುವುದೂ ಅಗತ್ಯ.

**ಗ್ರಾಮೀಣ ಸಂಸ್ಕೃತಿಯಲ್ಲಿ ಹಸುವಿನ ಸ್ಥಾನ**

ಹಸು ಭಾರತೀಯ ಗ್ರಾಮೀಣ ಸಂಸ್ಕೃತಿಯಲ್ಲಿಯೂ ವಿಶೇಷ ಸ್ಥಾನ ಪಡೆದಿದೆ. ವಿವಿಧ ಹಬ್ಬಗಳು, ಕೃಷಿ ಆಚರಣೆಗಳು ಮತ್ತು ಗ್ರಾಮೀಣ ಸಂಪ್ರದಾಯಗಳಲ್ಲಿ ಜಾನುವಾರುಗಳಿಗೆ ಗೌರವ ಸಲ್ಲಿಸುವ ಪದ್ಧತಿ ಹಲವು ಕಡೆ ಕಂಡುಬರುತ್ತದೆ. ರೈತನ ಜೀವನದಲ್ಲಿ ಹಸು ಕೇವಲ ಆರ್ಥಿಕ ಸಂಪನ್ಮೂಲವಲ್ಲ. ಅದು ದಿನನಿತ್ಯದ ಬದುಕಿನ ಭಾಗವಾಗಿರುತ್ತದೆ. ವರ್ಷಗಳ ಕಾಲ ಒಂದೇ ಕುಟುಂಬದೊಂದಿಗೆ ಬೆಳೆದ ಹಸುಗಳೊಂದಿಗೆ ರೈತ ಕುಟುಂಬಗಳಿಗೆ ಭಾವನಾತ್ಮಕ ಬಾಂಧವ್ಯವೂ ಬೆಳೆದುಬರುತ್ತದೆ. ಯುವಕರು ಹೈನುಗಾರಿಕೆಯತ್ತ ಬರಬೇಕು ಇಂದಿನ ದಿನಗಳಲ್ಲಿ ಗ್ರಾಮೀಣ ಯುವಕರು ಉದ್ಯೋಗಕ್ಕಾಗಿ ನಗರಗಳತ್ತ ತೆರಳುತ್ತಿರುವುದು ಸಾಮಾನ್ಯವಾಗಿದೆ. ಆದರೆ ಆಧುನಿಕ ತಂತ್ರಜ್ಞಾನ ಮತ್ತು ವೈಜ್ಞಾನಿಕ ನಿರ್ವಹಣೆಯನ್ನು ಬಳಸಿಕೊಂಡು ಹೈನುಗಾರಿಕೆಯನ್ನು ಉತ್ತಮ ಉದ್ಯಮವನ್ನಾಗಿ ರೂಪಿಸಬಹುದು. ಹಸುಗಳ ಉತ್ತಮ ತಳಿಗಳ ಆಯ್ಕೆ, ಪೌಷ್ಟಿಕ ಆಹಾರ ನಿರ್ವಹಣೆ, ಸ್ವಚ್ಛ ಕೊಟ್ಟಿಗೆ, ಹಾಲಿನ ಗುಣಮಟ್ಟದ ಸಂರಕ್ಷಣೆ ಹಾಗೂ ಮಾರುಕಟ್ಟೆಯ ಸರಿಯಾದ ಸಂಪರ್ಕದ ಮೂಲಕ ಹೈನುಗಾರಿಕೆಯಿಂದ ಉತ್ತಮ ಆದಾಯ ಪಡೆಯುವ ಅವಕಾಶವಿದೆ. ಯುವಕರು ಕೃಷಿಯ ಜೊತೆಗೆ ಹೈನುಗಾರಿಕೆ, ಪಶುಪಾಲನೆ ಮತ್ತು ಇತರ ಕೃಷಿ ಆಧಾರಿತ ಉದ್ಯಮಗಳತ್ತ ಗಮನಹರಿಸಿದರೆ ಗ್ರಾಮೀಣ ಪ್ರದೇಶಗಳಲ್ಲಿಯೇ ಉದ್ಯೋಗ ಮತ್ತು ಆದಾಯದ ಹೊಸ ಅವಕಾಶಗಳನ್ನು ಸೃಷ್ಟಿಸಬಹುದು.

**ಜಾನುವಾರುಗಳ ಬಗ್ಗೆ ಮಾನವೀಯತೆ ಇರಲಿ**

ಹಸುವನ್ನು ಸಾಕುವವರು ಅದರ ಅಗತ್ಯಗಳನ್ನು ಅರ್ಥಮಾಡಿಕೊಳ್ಳಬೇಕು. ಹಾಲು ನೀಡುವ ಸಂದರ್ಭದಲ್ಲಿ ಮಾತ್ರ ಪ್ರಾಣಿಯನ್ನು ಉಪಯೋಗಿಸಿ, ನಂತರ ನಿರ್ಲಕ್ಷಿಸುವ ಮನೋಭಾವ ಸರಿಯಲ್ಲ. ಜಾನುವಾರುಗಳಿಗೂ ಆಹಾರ, ನೀರು, ವಿಶ್ರಾಂತಿ ಮತ್ತು ಆರೈಕೆಯ ಅಗತ್ಯವಿದೆ. ವಯಸ್ಸಾದ ಅಥವಾ ಅನಾರೋಗ್ಯಕ್ಕೆ ಒಳಗಾದ ಜಾನುವಾರುಗಳನ್ನು ನಿರ್ಲಕ್ಷಿಸದೆ ಸಾಧ್ಯವಾದಷ್ಟು ಉತ್ತಮ ಆರೈಕೆ ನೀಡುವುದು ಪ್ರತಿಯೊಬ್ಬ ಜಾನುವಾರು ಸಾಕಾಣಿಕೆದಾರನ ಜವಾಬ್ದಾರಿಯಾಗಿದೆ. ಪ್ರಾಣಿಗಳ ಮೇಲಿನ ಕಾಳಜಿ ಮತ್ತು ಮಾನವೀಯತೆ ನಮ್ಮ ಸಮಾಜದ ಮೌಲ್ಯಗಳನ್ನು ಪ್ರತಿಬಿಂಬಿಸುತ್ತದೆ. ಹೈನುಗಾರಿಕೆಯನ್ನು ಮತ್ತಷ್ಟು ಬಲಪಡಿಸಬೇಕು ಗ್ರಾಮೀಣ ಆರ್ಥಿಕತೆಯನ್ನು ಬಲಪಡಿಸುವಲ್ಲಿ ಹೈನುಗಾರಿಕೆ ಪ್ರಮುಖ ಪಾತ್ರ ವಹಿಸಬಲ್ಲದು. ರೈತರಿಗೆ ಗುಣಮಟ್ಟದ ಜಾನುವಾರು, ಪಶುವೈದ್ಯಕೀಯ ಸೇವೆ, ಪಶು ಆಹಾರ, ತರಬೇತಿ, ಹಾಲಿಗೆ ನ್ಯಾಯಯುತ ಬೆಲೆ ಮತ್ತು ಮಾರುಕಟ್ಟೆ ಸೌಲಭ್ಯ ದೊರೆತರೆ ಹೈನುಗಾರಿಕೆ ಇನ್ನಷ್ಟು ಅಭಿವೃದ್ಧಿಯಾಗಬಹುದು. ರೈತರು ಒಬ್ಬೊಬ್ಬರಾಗಿ ಮಾತ್ರವಲ್ಲದೆ ಹಾಲು ಉತ್ಪಾದಕರ ಸಂಘಗಳು ಮತ್ತು ಸಹಕಾರಿ ವ್ಯವಸ್ಥೆಗಳ ಮೂಲಕ ಒಟ್ಟಾಗಿ ಕಾರ್ಯನಿರ್ವಹಿಸಿದರೆ ತಮ್ಮ ಉತ್ಪನ್ನಕ್ಕೆ ಉತ್ತಮ ಮಾರುಕಟ್ಟೆ ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ.

**ಹಸು ರೈತನ ಬದುಕಿನ ನಂಬಿಕೆಯ ಸಂಗಾತಿ**

ರೈತನ ಹೊಲದಲ್ಲಿ ಬೆಳೆ ಬೆಳೆಯುತ್ತದೆ; ಕೊಟ್ಟಿಗೆಯಲ್ಲಿ ಹಸು ಸಾಕಲ್ಪಡುತ್ತದೆ. ಹೊಲ ಮತ್ತು ಕೊಟ್ಟಿಗೆಯ ನಡುವಿನ ಈ ಸಂಬಂಧವೇ ಗ್ರಾಮೀಣ ಕೃಷಿ ವ್ಯವಸ್ಥೆಯ ಬಲವಾಗಿದೆ. ಹಸುವಿನಿಂದ ಹಾಲು ದೊರೆಯುತ್ತದೆ, ಸಗಣಿ ಕೃಷಿಗೆ ನೆರವಾಗುತ್ತದೆ ಮತ್ತು ಹೈನುಗಾರಿಕೆಯಿಂದ ಕುಟುಂಬಕ್ಕೆ ಆದಾಯ ದೊರೆಯುತ್ತದೆ. ಹೀಗಾಗಿ ಹಸುವಿನ ಕೊಡುಗೆ ಒಂದೇ ಕ್ಷೇತ್ರಕ್ಕೆ ಸೀಮಿತವಾಗಿಲ್ಲ. ಅದು ಆಹಾರ, ಕೃಷಿ, ಆರ್ಥಿಕತೆ, ಉದ್ಯೋಗ ಮತ್ತು ಗ್ರಾಮೀಣ ಜೀವನ?ಹೀಗೆ ಹಲವು ಕ್ಷೇತ್ರಗಳೊಂದಿಗೆ ಸಂಪರ್ಕ ಹೊಂದಿದೆ.

**ಸಮಾರೋಪ**

ಹಸು ನಮ್ಮ ಗ್ರಾಮೀಣ ಬದುಕಿನ ಅವಿಭಾಜ್ಯ ಅಂಗ. ರೈತನಿಗೆ ಅದು ಆದಾಯದ ಮೂಲವಾಗಿರುವುದರ ಜೊತೆಗೆ ಕೃಷಿಗೆ ಸಹಾಯಕವಾದ ಅಮೂಲ್ಯ ಸಂಪನ್ಮೂಲವೂ ಆಗಿದೆ. ಹಾಲಿನ ಮೂಲಕ ಆಹಾರಕ್ಕೆ ಕೊಡುಗೆ ನೀಡುವ ಹಸು, ಸಗಣಿಯ ಮೂಲಕ ಕೃಷಿಗೆ ನೆರವಾಗುತ್ತದೆ. ಹೈನುಗಾರಿಕೆಯ ಮೂಲಕ ಅನೇಕ ಕುಟುಂಬಗಳಿಗೆ ಜೀವನೋಪಾಯದ ಅವಕಾಶವನ್ನು ಒದಗಿಸುತ್ತದೆ. ಆದ್ದರಿಂದ ಹಸುಗಳ ಆರೋಗ್ಯ, ಸುರಕ್ಷತೆ ಮತ್ತು ಕಲ್ಯಾಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ರೈತರಿಗೆ ಆಧುನಿಕ ಹೈನುಗಾರಿಕೆ ಕುರಿತು ಸೂಕ್ತ ತರಬೇತಿ ಮತ್ತು ಸೌಲಭ್ಯಗಳನ್ನು ಒದಗಿಸಬೇಕು. ಸ್ಥಳೀಯ ಜಾನುವಾರು ತಳಿಗಳನ್ನು ಸಂರಕ್ಷಿಸಿ, ವೈಜ್ಞಾನಿಕ ಪಶುಪಾಲನೆಯನ್ನು ಉತ್ತೇಜಿಸಬೇಕು. ಹಸುವಿನ ಆರೈಕೆ ಎಂದರೆ ಕೇವಲ ಒಂದು ಪ್ರಾಣಿಯ ಆರೈಕೆಯಲ್ಲ; ಅದು ರೈತನ ಬದುಕು, ಗ್ರಾಮೀಣ ಆರ್ಥಿಕತೆ ಮತ್ತು ನಮ್ಮ ಕೃಷಿ ಸಂಸ್ಕೃತಿಯ ಒಂದು ಪ್ರಮುಖ ಭಾಗವನ್ನು ಕಾಪಾಡುವುದಾಗಿದೆ.

**ವಿನಾಯಕ ತಿಪ್ಪಣ್ಣನವರ**

# ಬಸವತತ್ವದ ಬೆಳಕಿನಲ್ಲಿ ಸಮಾಜಮುಖಿ ಸದ್ಗುರು ಬಸವಪ್ರಭು ಸ್ವಾಮೀಜಿಗಳು

ಹನ್ನೆರಡನೇ ಶತಮಾನದ ಕಲ್ಯಾಣ ಕ್ರಾಂತಿಯ ಮೂಲಕ ವಿಶ್ವಕ್ಕೆ ಸಮಾನತೆ, ಕಾಯಕ, ದಾಸೋಹ, ಮಾನವೀಯತೆ ಮತ್ತು ಸಾಮಾಜಿಕ ನ್ಯಾಯದ ಸಂದೇಶ ಸಾರಿದ ವಿಶ್ವಗುರು ಬಸವಣ್ಣನವರ ತತ್ವಾದರ್ಶಗಳು ಇಂದಿಗೂ ಮಾನವ ಸಮಾಜಕ್ಕೆ ದಾರಿದೀಪವಾಗಿವೆ. ಬಸವಣ್ಣನವರ ವಿಚಾರಗಳನ್ನು ಕೇವಲ ಧಾರ್ಮಿಕ ಆಚರಣೆಗಳಿಗೆ ಸೀಮಿತಗೊಳಿಸದೆ, ಅವುಗಳನ್ನು ಜನಸಾಮಾನ್ಯರ ಬದುಕಿನಲ್ಲಿ ಅನುಷ್ಠಾನಗೊಳಿಸುವುದು ನಿಜವಾದ ಬಸವತತ್ವದ ಅನುಯಾಯಿಗಳ ಕರ್ತವ್ಯವಾಗಿದೆ. ಈ ಮಹತ್ತರ ಆಶಯವನ್ನು ತಮ್ಮ ಜೀವನದ ಧ್ಯೇಯವನ್ನಾಗಿಸಿಕೊಂಡು, ಬಸವತತ್ವದ ಪ್ರಸಾರ, ಸಾಮಾಜಿಕ ಜಾಗೃತಿ, ರೈತರ ಹಿತಚಿಂತನೆ ಮತ್ತು ಲಿಂಗಾಯತ ಧರ್ಮದ ತಾತ್ವಿಕ ಬೆಳವಣಿಗೆಗಾಗಿ ಶ್ರಮಿಸುತ್ತಿರುವವರು ಬೀದರ ಜಿಲ್ಲೆಯ ಬಸವಕಲ್ಯಾಣ ತಾಲೂಕಿನ ಗುಣತೀರ್ಥವಾಡಿಯ ಕಲ್ಯಾಣ ಮಹಾಮನೆ ಮಹಾಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಸದ್ಗುರು ಬಸವಪ್ರಭು ಸ್ವಾಮೀಜಿಗಳು.

ಲಿಂಗಾಯತ ಧರ್ಮದ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡು, ಸಮಾಜದಲ್ಲಿ ಧಾರ್ಮಿಕ ಪ್ರಜ್ಞೆ, ನೈತಿಕ ಮೌಲ್ಯಗಳು ಮತ್ತು ಮಾನವೀಯತೆಯನ್ನು ಬೆಳೆಸುವ ಕಾರ್ಯದಲ್ಲಿ ತೊಡಗಿರುವ ಸ್ವಾಮೀಜಿಗಳ ಬದುಕು ಬಸವಣ್ಣನವರ ವಿಚಾರಧಾರೆಯ ಮಹತ್ವವನ್ನು ನೆನಪಿಸುತ್ತದೆ. ಮಠಾಧೀಶರಾಗಿರುವುದು ಎಂದರೆ ಕೇವಲ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸುವುದಲ್ಲ; ಸಮಾಜದ ನೋವುಗಳಿಗೆ ಸ್ಪಂದಿಸುವುದು, ದುರ್ಬಲರಿಗೆ ಧೈರ್ಯ ತುಂಬುವುದು, ರೈತರ ಸಂಕಷ್ಟಗಳನ್ನು ಅರಿಯುವುದು ಮತ್ತು ಧರ್ಮದ ನಿಜವಾದ ಆಶಯಗಳನ್ನು ಜನರಿಗೆ ತಲುಪಿಸುವುದಾಗಿದೆ. ಈ ದೃಷ್ಟಿಯಿಂದ ಸದ್ಗುರು ಬಸವಪ್ರಭು ಸ್ವಾಮೀಜಿಗಳ ಕಾರ್ಯಚಟುವಟಿಕೆಗಳನ್ನು ಸಮಾಜಮುಖಿ ಚಿಂತನೆಯ ಹಿನ್ನೆಲೆಯಲ್ಲಿ ಪರಿಗಣಿಸಬೇಕಾಗಿದೆ. ಬಸವಕಲ್ಯಾಣವು ಶರಣರ ಕ್ರಾಂತಿಕಾರಿ ವಿಚಾರಗಳಿಗೆ ಸಾಕ್ಷಿಯಾದ ಪವಿತ್ರ ನೆಲ. ಬಸವಣ್ಣನವರು ರೂಪಿಸಿದ ಅನುಭವ ಮಂಟಪವು ಜಾತಿ, ವರ್ಗ, ಲಿಂಗ ಮತ್ತು ವೃತ್ತಿಯ ಭೇದಗಳನ್ನು ಮೀರಿ ಪ್ರತಿಯೊಬ್ಬರಿಗೂ ತಮ್ಮ ವಿಚಾರಗಳನ್ನು ಅಭಿವ್ಯಕ್ತಪಡಿಸಲು ಅವಕಾಶ ಕಲ್ಪಿಸಿದ ಮಹಾನ್ ಚಿಂತನಾ ವೇದಿಕೆಯಾಗಿತ್ತು. ಅಂದು ಶರಣರು ಸಮಾಜದಲ್ಲಿ ಬೇರೂರಿದ್ದ ಅಸಮಾನತೆ, ಅಂಧಶ್ರದ್ಧೆ ಮತ್ತು ಶೋಷಣೆಯ ವಿರುದ್ಧ ಧ್ವನಿ ಎತ್ತಿದರು. ಕಾಯಕಕ್ಕೆ ಗೌರವ, ದಾಸೋಹಕ್ಕೆ ಮಹತ್ವ ಮತ್ತು ಮನುಷ್ಯನ ಘನತೆಗೆ ಆದ್ಯತೆ ನೀಡಿದರು. ಇಂತಹ ಕ್ರಾಂತಿಕಾರಿ ಪರಂಪರೆಯ ನೆಲದಲ್ಲಿ ಬಸವತತ್ವದ ಬೆಳಕನ್ನು ಮತ್ತಷ್ಟು ವಿಸ್ತರಿಸುವ ಹೊಣೆಗಾರಿಕೆ ಕಲ್ಯಾಣ ಮಹಾಮನೆ ಮಹಾಮಠದಂತಹ ಸಂಸ್ಥೆಗಳ




ಮೇಲಿದೆ.

ಮಠವೆಂದರೆ ಭಕ್ತರು ಬಂದು ಪೂಜೆ ಸಲ್ಲಿಸಿ ಹಿಂದಿರುಗುವ ಸ್ಥಳ ಮಾತ್ರವಾಗಬಾರದು. ಅದು ಸಮಾಜದ ಸಮಸ್ಯೆಗಳಿಗೆ ಪರಿಹಾರ ಹುಡುಕುವ ಕೇಂದ್ರವಾಗಬೇಕು. ಶಿಕ್ಷಣ, ಸಾಮಾಜಿಕ ನ್ಯಾಯ, ಧಾರ್ಮಿಕ ಜಾಗೃತಿ, ಪರಿಸರ ಸಂರಕ್ಷಣೆ, ರೈತರ ಕಲ್ಯಾಣ ಮತ್ತು ಯುವಜನರ ವ್ಯಕ್ತಿತ್ವ ವಿಕಸನಕ್ಕೆ ಪೂರಕವಾದ ಕಾರ್ಯಗಳಿಗೆ ಆದ್ಯತೆ ನೀಡಬೇಕು. ಧರ್ಮದ ಹೆಸರಿನಲ್ಲಿ ಮನುಷ್ಯರನ್ನು ವಿಭಜಿಸುವ ಬದಲು, ಧರ್ಮದ ಮೂಲಕ ಜನರನ್ನು ಒಗ್ಗೂಡಿಸುವ ಪ್ರಯತ್ನ ನಡೆಯಬೇಕು. ಹಸಿದವರಿಗೆ ಅನ್ನ, ಅಶಕ್ತರಿಗೆ ಆಸರೆ, ಅನ್ಯಾಯಕ್ಕೊಳಗಾದವರಿಗೆ ನ್ಯಾಯ ಮತ್ತು ಸಂಕಷ್ಟದಲ್ಲಿರುವವರಿಗೆ ಸಾಂತ್ವನ ದೊರೆಯುವಂತೆ ಮಾಡುವುದೇ ನಿಜವಾದ ಧಾರ್ಮಿಕ ಸೇವೆಯಾಗಿದೆ. ಪೂಜ್ಯ ಸದ್ಗುರು ಬಸವಪ್ರಭು ಸ್ವಾಮೀಜಿಗಳ ಸಾಮಾಜಿಕ ಕಳಕಳಿಯನ್ನು ಅರ್ಥಮಾಡಿಕೊಳ್ಳುವಾಗ ರೈತರ ಬದುಕಿನ ಕುರಿತಾದ ಅವರ ಚಿಂತನೆಗಳಿಗೆ ವಿಶೇಷ ಮಹತ್ವ ನೀಡಬೇಕಾಗಿದೆ. ರೈತರು ದೇಶದ ಬೆನ್ನೆಲುಬು ಎಂಬ ಮಾತು ಕೇವಲ ಘೋಷಣೆಯಾಗಿ ಉಳಿಯಬಾರದು. ರೈತರ ಶ್ರಮಕ್ಕೆ ಗೌರವ ದೊರೆಯಬೇಕು; ಅವರ ಬದುಕು ಆರ್ಥಿಕವಾಗಿ ಸುರಕ್ಷಿತವಾಗಬೇಕು. ಮಳೆ, ಬರ, ಅತಿವೃಷ್ಟಿ, ಬೆಳೆನಾಶ, ಕೃಷಿ ವೆಚ್ಚಗಳ ಏರಿಕೆ ಮತ್ತು ಮಾರುಕಟ್ಟೆಯ ಅನಿಶ್ಚಿತತೆಗಳಿಂದ ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ. ಅದರಲ್ಲೂ ಕಲ್ಯಾಣ ಕರ್ನಾಟಕದ ಬೀದರ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕೃಷಿಯೇ ಅನೇಕ ಕುಟುಂಬಗಳ ಪ್ರಮುಖ ಜೀವನಾಧಾರವಾಗಿದೆ. ಇಂತಹ ಸಂದರ್ಭದಲ್ಲಿ ರೈತರ ನೋವುಗಳಿಗೆ ಸ್ಪಂದಿಸುವುದು ಮತ್ತು ಅವರ ಹಕ್ಕುಗಳ ಕುರಿತು ಜನಜಾಗೃತಿ ಮೂಡಿಸುವುದು ಸಮಾಜಮುಖಿ ಧಾರ್ಮಿಕ ನಾಯಕರ ಮಹತ್ವದ ಜವಾಬ್ದಾರಿಯಾಗಿದೆ. ವಿಶ್ವಗುರು ಬಸವಣ್ಣನವರು ಪ್ರತಿಪಾದಿಸಿದ ಕಾಯಕತತ್ವವು ರೈತರ ಬದುಕಿನಲ್ಲಿಯೂ ಜೀವಂತವಾಗಿದೆ. ಭೂಮಿಯನ್ನು ಹದಗೊಳಿಸಿ, ಬೀಜ ಬಿತ್ತಿ, ಬೆಳೆ ಬೆಳೆಸಿ, ಸಮಾಜಕ್ಕೆ ಅನ್ನ ನೀಡುವ ರೈತನ ಪರಿಶ್ರಮ ಅತ್ಯಂತ ಮೌಲ್ಯಯುತವಾದದ್ದು. ರೈತನ ಬೆವರಿನಿಂದಲೇ ಜನರ ಬದುಕು ಸಾಗುತ್ತದೆ. ಆದ್ದರಿಂದ ರೈತರನ್ನು ಕೇವಲ ಆಹಾರ ಉತ್ಪಾದಕರನ್ನಾಗಿ ನೋಡದೆ, ದೇಶದ ಆರ್ಥಿಕತೆ ಮತ್ತು ಸಾಮಾಜಿಕ ಸ್ಥಿರತೆಯ ಪ್ರಮುಖ ಶಕ್ತಿಯಾಗಿ ಗುರುತಿಸಬೇಕು. ರೈತರ ಸಂಕಷ್ಟಗಳಿಗೆ ಸ್ಪಂದಿಸುವುದು, ಕೃಷಿಯ ಸಮಸ್ಯೆಗಳ ಕುರಿತು ಚರ್ಚೆಗಳನ್ನು ಆಯೋಜಿಸುವುದು, ವೈಜ್ಞಾನಿಕ ಕೃಷಿ ಪದ್ಧತಿಗಳ ಬಗ್ಗೆ ಅರಿವು ಮೂಡಿಸುವುದು ಮತ್ತು ರೈತರಿಗೆ ಸರ್ಕಾರದ ಸೌಲಭ್ಯಗಳು ತಲುಪುವಂತೆ ಜಾಗೃತಿ ಮೂಡಿಸುವುದು ಬಸವತತ್ವದ ಕಾಯಕ ಸಂದೇಶದ ಪ್ರಾಯೋಗಿಕ ಅನುಷ್ಠಾನವಾಗಿದೆ.

ರೈತರ ಬದುಕು ಹಸನಾಗಬೇಕಾದರೆ ಕೃಷಿಯ ಜೊತೆಗೆ ಪರಿಸರ ಸಂರಕ್ಷಣೆಗೂ ಹೆಚ್ಚಿನ ಆದ್ಯತೆ ನೀಡಬೇಕು. ನೀರಿನ ಕೊರತೆ, ಅಂತರ್ಜಲ ಕುಸಿತ, ಅರಣ್ಯನಾಶ ಮತ್ತು ಮಣ್ಣಿನ ಫಲವತ್ತತೆಯ ಕುಸಿತ ಕೃಷಿ ಕ್ಷೇತ್ರದ ಮೇಲೆ ಗಂಭೀರ ಪರಿಣಾಮ ಬೀರುತ್ತಿವೆ. ಪ್ರಕೃತಿಯ ಸಮತೋಲನ ಹದಗೆಟ್ಟರೆ ಕೃಷಿಯೂ ಸಂಕಷ್ಟಕ್ಕೆ ಸಿಲುಕುತ್ತದೆ. ಆದ್ದರಿಂದ ಕೆರೆಗಳ ಸಂರಕ್ಷಣೆ, ಮಳೆನೀರು ಕೊಯ್ಲು, ಜಲಸಂರಕ್ಷಣೆ, ಮರಗಳ ಬೆಳೆಸುವಿಕೆ ಮತ್ತು ಮಣ್ಣಿನ ಸಂರಕ್ಷಣೆಯ ಕುರಿತು ಗ್ರಾಮೀಣ ಜನರಲ್ಲಿ ಜಾಗೃತಿ ಮೂಡಿಸಬೇಕು. ಬಸವತತ್ವವು ಕಾಯಕ ಮತ್ತು ಮಾನವೀಯತೆಯನ್ನು ಬೋಧಿಸುವುದರ ಜೊತೆಗೆ, ಜೀವಜಗತ್ತಿನ ಬಗ್ಗೆ ಕಾಳಜಿ ವಹಿಸುವ ಮನೋಭಾವಕ್ಕೂ ಪ್ರೇರಣೆ ನೀಡುತ್ತದೆ. ಪ್ರಕೃತಿಯನ್ನು ಉಳಿಸುವುದು ಮುಂದಿನ ಪೀಳಿಗೆಯ ಬದುಕನ್ನು ಉಳಿಸುವುದಕ್ಕೆ ಸಮಾನವಾಗಿದೆ. ಪೂಜ್ಯ ಸದ್ಗುರು ಬಸವಪ್ರಭು ಸ್ವಾಮೀಜಿಗಳ ಚಿಂತನೆಗಳಲ್ಲಿ ಲಿಂಗಾಯತ ಧರ್ಮದ ತಾತ್ವಿಕ ಸ್ವರೂಪ ಮತ್ತು ಅದರ ವಿಶಿಷ್ಟ ಪರಂಪರೆಯ ಸಂರಕ್ಷಣೆಯೂ ಮಹತ್ವದ ಸ್ಥಾನ ಪಡೆದಿವೆ. ಲಿಂಗಾಯತ ಧರ್ಮದ ಮೂಲ ಆಶಯಗಳನ್ನು ಅರಿಯಲು ಬಸವಣ್ಣನವರು ಮತ್ತು ಶರಣರು ರಚಿಸಿದ ವಚನ ಸಾಹಿತ್ಯದ ಅಧ್ಯಯನ ಅತ್ಯಗತ್ಯ. ವಚನಗಳು ಕೇವಲ ಭಕ್ತಿಯ ಅಭಿವ್ಯಕ್ತಿಗಳಲ್ಲ; ಅವು ಸಾಮಾಜಿಕ ಸಮಾನತೆ, ನೈತಿಕ ಬದುಕು, ದುಡಿಮೆಯ ಘನತೆ, ಅಂತರಂಗದ ಶುದ್ಧತೆ ಮತ್ತು ಮನುಷ್ಯನ ಸ್ವಾತಂತ್ರ್ಯದ ವಿಚಾರಗಳನ್ನು ಒಳಗೊಂಡಿವೆ. ಶರಣರ ವಿಚಾರಗಳನ್ನು ಓದುವುದು, ಅರ್ಥಮಾಡಿಕೊಳ್ಳುವುದು ಮತ್ತು ಬದುಕಿನಲ್ಲಿ ಅಳವಡಿಸಿಕೊಳ್ಳುವುದು ಲಿಂಗಾಯತ ಧರ್ಮದ ತಾತ್ವಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ತಲುಪಿಸುವ ಅತ್ಯುತ್ತಮ ಮಾರ್ಗವಾಗಿದೆ. ಇಂದು ಲಿಂಗಾಯತ ಧರ್ಮದ ಅಸ್ಮಿತೆ, ಸ್ವತಂತ್ರ ತಾತ್ವಿಕ ಪರಂಪರೆ ಮತ್ತು ಸಾಮಾಜಿಕ ಕೊಡುಗೆಗಳ ಕುರಿತು ಅನೇಕ ಚರ್ಚೆಗಳು ನಡೆಯುತ್ತಿವೆ. ಇಂತಹ ವಿಚಾರಗಳನ್ನು ಭಾವನಾತ್ಮಕ ಘೋಷಣೆಗಳಿಗೆ ಸೀಮಿತಗೊಳಿಸದೆ, ಐತಿಹಾಸಿಕ ದಾಖಲೆಗಳು, ವಚನ ಸಾಹಿತ್ಯ ಮತ್ತು ವೈಚಾರಿಕ ಅಧ್ಯಯನದ ಆಧಾರದಲ್ಲಿ ಚರ್ಚಿಸಬೇಕು. ಭಿನ್ನಾಭಿಪ್ರಾಯಗಳಿದ್ದರೂ ಪರಸ್ಪರ ಗೌರವದಿಂದ ಸಂವಾದ ನಡೆಸುವ ಮನೋಭಾವ ಬೆಳೆಸಿಕೊಳ್ಳಬೇಕು. ಧರ್ಮದ ಹೆಸರಿನಲ್ಲಿ ದ್ವೇಷ ಬಿತ್ತುವುದು ಬಸವಣ್ಣನವರ ಆಶಯಕ್ಕೆ ವಿರುದ್ಧವಾದದ್ದು. ಬಸವತತ್ವದ ನಿಜವಾದ ಶಕ್ತಿ ಸಮಾನತೆ, ಸ್ವಾಭಿಮಾನ, ವೈಚಾರಿಕತೆ ಮತ್ತು ಮಾನವೀಯತೆಯಲ್ಲಿದೆ. ಈ ಮೌಲ್ಯಗಳನ್ನು ಸಮಾಜದಲ್ಲಿ ಬಲಪಡಿಸುವುದು ಲಿಂಗಾಯತ ಧರ್ಮದ ತಾತ್ವಿಕ ಬೆಳವಣಿಗೆಗೆ ಸಹಕಾರಿಯಾಗುತ್ತದೆ.

ವಿಶ್ವ ಗುರು ಬಸವಣ್ಣನವರ ವಿಚಾರಧಾರೆಯಲ್ಲಿ ಮಹಿಳೆಯರ ಘನತೆ ಮತ್ತು ಸಮಾನತೆಗೂ ಮಹತ್ವದ ಸ್ಥಾನವಿದೆ. ಅಕ್ಕಮಹಾದೇವಿ, ಅಕ್ಕನಾಗಮ್ಮ ಸೇರಿದಂತೆ ಅನೇಕ ಶರಣೆಯರು ತಮ್ಮ ವಚನಗಳ ಮೂಲಕ ಸಮಾಜಕ್ಕೆ ವೈಚಾರಿಕ ಬೆಳಕು ನೀಡಿದರು. ಅವರ ಚಿಂತನೆಗಳು ಮಹಿಳೆಯರ ಸ್ವಾಭಿಮಾನ, ಸ್ವಾತಂತ್ರ್ಯ ಮತ್ತು ಆತ್ಮಗೌರವದ ಮಹತ್ವವನ್ನು ಸಾರುತ್ತವೆ. ಇಂದಿನ ಸಮಾಜದಲ್ಲಿ ಮಹಿಳೆಯರಿಗೆ ಶಿಕ್ಷಣ, ಸಮಾನ ಅವಕಾಶ, ಸುರಕ್ಷತೆ ಮತ್ತು ಗೌರವಯುತ ಬದುಕು ದೊರೆಯಬೇಕು. ಜಾತಿ, ಲಿಂಗ, ಆರ್ಥಿಕ ಸ್ಥಿತಿ ಅಥವಾ ಸಾಮಾಜಿಕ ಹಿನ್ನೆಲೆಯ ಆಧಾರದ ಮೇಲೆ ಯಾರನ್ನೂ ಕೀಳಾಗಿ ಕಾಣಬಾರದು. ಶರಣರ ಸಮಾನತೆಯ ಆಶಯಗಳನ್ನು ಬದುಕಿನಲ್ಲಿ ಅನುಷ್ಠಾನಗೊಳಿಸಿದಾಗ ಮಾತ್ರ ಸಮಾಜದಲ್ಲಿ ನಿಜವಾದ ಪರಿವರ್ತನೆ ಸಾಧ್ಯವಾಗುತ್ತದೆ. ಯುವಜನರಲ್ಲಿ ವೈಚಾರಿಕ ಪ್ರಜ್ಞೆ ಮೂಡಿಸುವುದೂ ಇಂದಿನ ಮಠಗಳ ಪ್ರಮುಖ ಕರ್ತವ್ಯವಾಗಿದೆ. ನಿರುದ್ಯೋಗ, ಶಿಕ್ಷಣದ ವೆಚ್ಚ, ಕೃಷಿಯ ಅನಿಶ್ಚಿತತೆ ಮತ್ತು ಸಾಮಾಜಿಕ ಒತ್ತಡಗಳು ಯುವಜನರ ಮುಂದಿರುವ ಸವಾಲುಗಳಾಗಿವೆ. ಅವರಿಗೆ ಕೇವಲ ಧಾರ್ಮಿಕ ಉಪದೇಶ ನೀಡುವುದಷ್ಟೇ ಸಾಕಾಗುವುದಿಲ್ಲ. ಶಿಕ್ಷಣ, ಕೌಶಲಾಭಿವೃದ್ಧಿ, ವೈಜ್ಞಾನಿಕ ಮನೋಭಾವ, ಪುಸ್ತಕ ಓದುವ ಅಭ್ಯಾಸ ಮತ್ತು ಸಾಮಾಜಿಕ ಜವಾಬ್ದಾರಿಗಳ ಕುರಿತು ಮಾರ್ಗದರ್ಶನ ನೀಡಬೇಕು. ವಚನ ಸಾಹಿತ್ಯದ ಅಧ್ಯಯನ ಶಿಬಿರಗಳು, ವಿಚಾರಗೋಷ್ಠಿಗಳು, ಪುಸ್ತಕ ಪರಿಚಯ ಕಾರ್ಯಕ್ರಮಗಳು ಮತ್ತು ಯುವಜನರ ಸಂವಾದಗಳನ್ನು ಆಯೋಜಿಸುವ ಮೂಲಕ ಬಸವತತ್ವದ ಸಂದೇಶವನ್ನು ಸಮಕಾಲೀನ ಬದುಕಿಗೆ ಜೋಡಿಸಬಹುದು. ಮಾನವೀಯತೆಯ ಹರಿಕಾರ ಬಸವಣ್ಣನವರ ಕಾಯಕ, ದಾಸೋಹ ಮತ್ತು ಸಮಾನತೆಯ ತತ್ವಗಳು ಕೇವಲ ಒಂದು ಸಮುದಾಯಕ್ಕೆ ಸೀಮಿತವಾದವುಗಳಲ್ಲ. ಅವು ವಿಶ್ವಮಾನವತೆಯ ಮೌಲ್ಯಗಳಾಗಿವೆ. ಹೀಗಾಗಿ ಲಿಂಗಾಯತ ಧರ್ಮದ ತಾತ್ವಿಕ ಬೆಳವಣಿಗೆಯ ಕುರಿತು ಚಿಂತಿಸುವಾಗ ಇತರ ಧರ್ಮಗಳ ಜನರೊಂದಿಗೆ ಸಹಬಾಳ್ವೆ, ಸಂವಿಧಾನದ ಮೌಲ್ಯಗಳಿಗೆ ಗೌರವ ಮತ್ತು ಪ್ರಜಾಪ್ರಭುತ್ವದ ಆಶಯಗಳಿಗೆ ಬದ್ಧತೆ ಇರಬೇಕು. ಧಾರ್ಮಿಕ ನಾಯಕತ್ವವು ಸಮಾಜದಲ್ಲಿ ಶಾಂತಿ, ಸಹೋದರತೆ ಮತ್ತು ನ್ಯಾಯವನ್ನು ಬಲಪಡಿಸಬೇಕು. ಮಠಗಳು ಸಮಾಜದ ಎಲ್ಲ ವರ್ಗದ ಜನರಿಗೂ ತೆರೆದಿರುವ ಮಾನವೀಯ ಸೇವಾ ಕೇಂದ್ರಗಳಾಗಬೇಕು. ಪರಮಪೂಜ್ಯ ಸದ್ಗುರು ಬಸವಪ್ರಭು ಸ್ವಾಮೀಜಿಗಳ ಬಸವತತ್ವದ ಬಗೆಗಿನ ಕಾಳಜಿ, ರೈತರ ಹಿತಾಸಕ್ತಿಯ ಕುರಿತು ಅವರ ಚಿಂತನೆಗಳು ಮತ್ತು ಲಿಂಗಾಯತ ಧರ್ಮದ ತಾತ್ವಿಕ ಪರಂಪರೆಯ ಪ್ರಸಾರದ ಪ್ರಯತ್ನಗಳು ಸಮಾಜದಲ್ಲಿ ಆರೋಗ್ಯಕರ ಚರ್ಚೆಗೆ ಪ್ರೇರಣೆಯಾಗಲಿ. ಅವರ ನೇತೃತ್ವದ ಕಲ್ಯಾಣ ಮಹಾಮನೆ ಮಹಾಮಠವು ಶರಣರ ವಿಚಾರಗಳನ್ನು ಜನಜೀವನಕ್ಕೆ ತಲುಪಿಸುವುದರ ಜೊತೆಗೆ ಶಿಕ್ಷಣ, ಪರಿಸರ ಸಂರಕ್ಷಣೆ, ಕೃಷಿ ಜಾಗೃತಿ ಮತ್ತು ಸಾಮಾಜಿಕ ನ್ಯಾಯದ ಕಾರ್ಯಗಳಿಗೆ ಮತ್ತಷ್ಟು ಶಕ್ತಿಯುತ ವೇದಿಕೆಯಾಗಲಿ ಎಂಬುದು ಆಶಯವಾಗಿದೆ.

ಒಟ್ಟಿನಲ್ಲಿ, ಬಸವತತ್ವದ ನಿಜವಾದ ಅರ್ಥವನ್ನು ಅರಿಯಬೇಕಾದರೆ ಬಸವಣ್ಣನವರ ವಿಚಾರಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ರೈತನ ಶ್ರಮಕ್ಕೆ ಗೌರವ ನೀಡಬೇಕು, ಬಡವರ ಸಂಕಷ್ಟಗಳಿಗೆ ಸ್ಪಂದಿಸಬೇಕು, ಮಹಿಳೆಯರಿಗೆ ಸಮಾನ ಅವಕಾಶ ಕಲ್ಪಿಸಬೇಕು, ಯುವಜನರಲ್ಲಿ ವೈಚಾರಿಕ ಪ್ರಜ್ಞೆ ಬೆಳೆಸಬೇಕು ಮತ್ತು ಧರ್ಮವನ್ನು ಮಾನವೀಯತೆಯ ನೆಲೆಯಲ್ಲಿ ಅರ್ಥಮಾಡಿಕೊಳ್ಳಬೇಕು. ಮನುಷ್ಯನನ್ನು ಮನುಷ್ಯನಾಗಿ ಗೌರವಿಸುವ, ದುಡಿಮೆಗೆ ಘನತೆ ನೀಡುವ ಮತ್ತು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ದೊರಕಿಸುವ ವ್ಯವಸ್ಥೆಯ ನಿರ್ಮಾಣವೇ ಬಸವಣ್ಣನವರ ಕನಸಿನ ಸಮಾಜವಾಗಿದೆ. ಕಾಯಕವೇ ಕೈಲಾಸ, ದಾಸೋಹವೇ ಧರ್ಮ, ಸಮಾನತೆಯೇ ಸಮಾಜದ ಶಕ್ತಿ ಮತ್ತು ಮಾನವೀಯತೆಯೇ ಬದುಕಿನ ಸಾರ್ಥಕತೆ. ಈ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಬಸವತತ್ವದ ಬೆಳಕು ಮನೆಮನೆಗೂ ತಲುಪಲು ಸಾಧ್ಯ. ಸದ್ಗುರು ಬಸವಪ್ರಭು ಸ್ವಾಮೀಜಿಗಳ ಸಮಾಜಮುಖಿ ಚಿಂತನೆಗಳು ಇಂತಹ ಮಾನವೀಯ ಸಮಾಜದ ನಿರ್ಮಾಣಕ್ಕೆ ಪ್ರೇರಣೆಯಾಗಲಿ.



**ಸಂಗಮೇಶ ಎನ್ ಜವಾದಿ,**
**ಬರಹಗಾರರು, ಪರಿಸರವಾದಿ, ಬೀದರ ಜಿಲ್ಲೆ.**

ಈ ನಮ್ಮ ಧೃತಿ ನ್ಯೂಸ್
E NAMMA DHURTHI NEWS
KANNADA DAILY NEWS PAPER

## ಸಿದ್ದರಾಮಯ್ಯನವರ ಕುರಿತ ವಿಡಿಯೋ ಹರಿಬಿಟ್ಟ ಪ್ರಕರಣ : ಇಬ್ಬರು ಶಂಕಿತರು ವಶಕ್ಕೆ

ಬೆಂಗಳೂರು: ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋ ಹರಿಬಿಟ್ಟು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಗೌರವಕ್ಕೆ ಧಕ್ಕೆ ತರಲು ಯತ್ನಿಸಿದ ಪ್ರಕರಣದ ತನಿಖೆ ನಡೆಸುತ್ತಿರುವ ಸಿಸಿಬಿಯ ಸೈಬರ್ ಕ್ರೈಂ ಪೊಲೀಸರು ಇಬ್ಬರು ಶಂಕಿತರನ್ನು ವಶಕ್ಕೆ ಪಡೆದಿದ್ದಾರೆ. ಅವರನ್ನು ಅಜ್ಞಾತ ಸ್ಥಳದಲ್ಲಿಟ್ಟು ಪೊಲೀಸರು ವಿಚಾರಣೆ ನಡೆಸುತ್ತಿದ್ದು, ಪ್ರಕರಣಕ್ಕೆ ಸಂಬಂಧಿಸಿದ ಮಾಹಿತಿಯನ್ನು ಕಲೆಹಾಕುತ್ತಿದ್ದಾರೆ.




ಈ ಕೃತ್ಯದ ಹಿಂದೆ ಯಾರ ಕೈವಾಡವಿದೆ, ವಿಡಿಯೋವನ್ನು ಎಲ್ಲಿಂದ ಸೃಷ್ಟಿಸಲಾಗಿದೆ ಹಾಗೂ ಯಾರೆಲ್ಲ ಹೆಚ್ಚು ಫಾರ್ವರ್ಡ್ ಮಾಡಿದ್ದಾರೆ ಎಂಬ ಬಗ್ಗೆ ಸೈಬರ್ ಕ್ರೈಂ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ ತಮ್ಮ ವಿರುದ್ಧ ನಕಲಿ ಹಾಗೂ ದುರುದ್ದೇಶಪೂರಿತ ವಿಡಿಯೋಗಳನ್ನು ಹಂಚಿಕೆ ಮಾಡಿ ತೇಜೋವಧೆ ಮಾಡಲಾಗುತ್ತಿದೆ ಎಂದು ಸಿದ್ದರಾಮಯ್ಯ ಅವರು ನಗರದ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರಿಗೆ ದೂರು ನೀಡಿದ್ದರು. ಸುಳ್ಳು ಮಾಹಿತಿ ಹರಡುತ್ತಿದ್ದ ನಿರ್ದಿಷ್ಟ ಸಾಮಾಜಿಕ ಜಾಲತಾಣ ಖಾತೆಗಳ ಐಡಿ ಹಾಗೂ ಇತರ ವಿವರಗಳನ್ನು ದೂರಿನೊಂದಿಗೆ ನೀಡಿದ್ದರು. ಈ ದೂರನ್ನು ಗಂಭೀರವಾಗಿ ಪರಿಗಣಿಸಿದ ನಗರ ಪೊಲೀಸ್ ಆಯುಕ್ತರು, ತನಿಖೆಗಾಗಿ ಸಿಸಿಬಿಯ ಸೈಬರ್ ಕ್ರೈಂ ಠಾಣೆಗೆ ವಹಿಸಿದ್ದರು.ಈ ದೂರಿನ ಆಧಾರದ ಮೇಲೆ ಸಿಸಿಬಿಯ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಸಾಮಾಜಿಕ ಜಾಲತಾಣಗಳ ಮೇಲೆ ಹದ್ದಿನ ಕಣ್ಣಿಟ್ಟಿರುವ ಸೈಬರ್ ಕ್ರೈಂ ಠಾಣೆ ಪೊಲೀಸರು, ವಿಡಿಯೋವನ್ನು ಪ್ರಚಾರ ಮಾಡಿದ ಪ್ರಮುಖ ಖಾತೆಗಳ ಐಪಿ ವಿಳಾಸಗಳ ಮೂಲಕ ಸಾಧನಗಳ ಮಾಲೀಕರನ್ನು ಪತ್ತೆಹಚ್ಚುವ ಕಾರ್ಯದಲ್ಲಿ ತೊಡಗಿದ್ದಾರೆ.

## ಅಸ್ಸಾಂ : ಕಾರಿನಲ್ಲಿ ಅಡಗಿಸಿಟ್ಟು ಸಾಗಿಸುತ್ತಿದ್ದ 2 ಕೋಟಿ ಮೌಲ್ಯದ ಡ್ರಗ್ಸ್ ವಶ

ಗುವಾಹಟಿ: ಅಸ್ಸಾಂನ ಕೊಕ್ರಜಾರ್ ಜಿಲ್ಲೆಯಲ್ಲಿ ಸುಮಾರು 2 ಕೋಟಿ ರೂ. ಮೌಲ್ಯದ ಮಾದಕವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಓರ್ವ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ತಿಳಿಸಿದ್ದಾರೆ.




ವಾಹನವೊಂದರಲ್ಲಿ ವಿಶೇಷವಾಗಿ ನಿರ್ಮಿಸಲಾಗಿದ್ದ ರಹಸ್ಯ ಕೋಣೆಗಳಿಂದ 27.3 ಕೆ.ಜಿ. ಶಂಕಿತ ಅಫೀಮನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ ಎಂದು ಶರ್ಮಾ ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಈ ಕಾರ್ಯಾಚರಣೆಯಲ್ಲಿ ಸುಮಾರು 2 ಕೋಟಿ ರೂ. ಮೌಲ್ಯದ ಮಾದಕವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಓರ್ವ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ. ಕಾರ್ಯಾಚರಣೆಯನ್ನು ಯಶಸ್ವಿಯಾಗಿ ನಡೆಸಿದ ಪೊಲೀಸರನ್ನು ಶರ್ಮಾ ಶ್ಲಾಘಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಅಗತ್ಯ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ‘ಸ್ಟಿಂಗ್ ಆಪರೇಷನ್’ ಹೆಸರಲ್ಲಿ ಸಿದ್ದರಾಮಯ್ಯನವರ ಚಾರಿತ್ರ್ಯ ವಧೆಯಾಗಬಾರದು : ಎಂ.ಬಿ.ಪಾಟೀಲ್

ಬೆಂಗಳೂರು: ಸ್ಟಿಂಗ್ ಆಪರೇಷನ್ ಎಂಬುದು ಕೆಟ್ಟ ಚಾಳಿಯಾಗಿದ್ದು, ಯಾರೇ ಮಾಡಿದ್ದರೂ ಒಳ್ಳೆಯದಲ್ಲ ಎಂದು ಬೃಹತ್ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜಕೀಯವಾಗಿ ಈ ರೀತಿ ಮಾಡಬಾರದು. ಹಣಕ್ಕಾಗಿಯೋ, ರಾಜಕೀಯ ಲಾಭಕ್ಕಾಗಿಯೋ ನಡೆಯುವಂತಹ ಚಾರಿತ್ರ್ಯವಧೆ ನಿಲ್ಲಬೇಕು ಎಂದು ಹೇಳಿದರು.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ದೇಶದಲ್ಲೇ



ಅತ್ಯುತ್ತಮ ನಾಯಕ ಎಂಬ ಹೆಸರು ಗಳಿಸಿದ್ದಾರೆ. ಅಂಥವರ ಚಾರಿತ್ರ್ಯ ವಧೆಯಾಗಬಾರದು. ಸ್ಟಿಂಗ್ ಆಪರೇಷನ್ ಎಂಬುದು ನಿರ್ನಾಮವಾಗಬೇಕು ಎಂದರು. ಕಬ್ಬಿಗೆ ವೈಜ್ಞಾನಿಕವಾದ ಬೆಲೆ ನಿಗದಿಯಾಗಬೇಕು. ಕೇಂದ್ರ ಸರ್ಕಾರ ಅಂಥ ವ್ಯವಸ್ಥೆಯನ್ನು ಮಾಡಬೇಕು. ಕಬ್ಬು ಬೆಳೆಗಾರರು ಪ್ರತಿಭಟನೆ ಮಾಡುತ್ತಿದ್ದು, ಅವರಿಗೆ ಕೇಂದ್ರ ಸರ್ಕಾರ ನ್ಯಾಯವಾದ ಬೆಲೆ ಒದಗಿಸಿಕೊಡಬೇಕು ಎಂದು ಅವರು ಇದೇ ಸಂದರ್ಭದಲ್ಲಿ ಆಗ್ರಹಿಸಿದರು. ಕಬ್ಬು ಬೆಳೆಗಾರರ ವಿಚಾರದಲ್ಲಿ ಪ್ರಧಾನಿಯವರೇ ಮಧ್ಯಪ್ರವೇಶ ಮಾಡಬೇಕು. ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಹಾಗೂ ರೈತರನ್ನು ಕರೆಸಿ ಮಾತುಕತೆ ನಡೆಸಿ ಸಮಸ್ಯೆಗೆ ಪರಿಹಾರ ಒದಗಿಸಬೇಕು ಎಂದು ಅವರು ಹೇಳಿದರು. ಝೆಕ್ ಗಣರಾಜ್ಯದ ಪ್ರತಿನಿಧಿಗಳು ಮುಖ್ಯಮಂತ್ರಿಯವರನ್ನು ಭೇಟಿ ಮಾಡಿ ಭಾರತದೊಂದಿಗಿನ ವ್ಯಾಪಾರ ಕುರಿತಂತೆ ಚರ್ಚೆ ನಡೆಸಿದ್ದಾರೆ. ಏರೋಸ್ಪೇಸ್ ಅವರಿಗೆ ಮನವರಿಕೆ ಮಾಡಿಕೊಟ್ಟಿದ್ದೇವೆ. ನಮ್ಮಲ್ಲಿ ಇರುವ ವಿವಿಧ ಕಂಪನಿಗಳ ವಿವರವನ್ನು ತಿಳಿಸಿದ್ದು, ಜಾಗತಿಕ ಹೂಡಿಕೆದಾರರ ಸಮೇಳನದ ತಾಂತ್ರಿಕ ಪಾಲುದಾರರಾಗುವಂತೆ ಆಹ್ವಾನ ನೀಡಿದ್ದೇವೆ ಎಂದು ಪಾಟೀಲ್ ತಿಳಿಸಿದರು.

## ಕಾಂಗೋದಲ್ಲಿ ಸಾವಿನ ಕೇಕೆ : ಎಬೋಲ ಸೋಂಕಿಗೆ 4,300ಕ್ಕೂ ಹೆಚ್ಚು ಮಂದಿ ಬಲಿ

ಬುನಿಯಾ: ಕಾಂಗೋದಲ್ಲಿ ಎಬೋಲಾ ಸೋಂಕಿನ ಪ್ರಕರಣಗಳ ಸಂಖ್ಯೆ 9,000 ದಾಟಿದ್ದು, 4,300ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದಾರೆ. ಏಳು ಪ್ರಾಂತ್ಯಗಳಲ್ಲಿ ಸೋಂಕು ಹರಡುತ್ತಿದ್ದು, ಅದನ್ನು ನಿಯಂತ್ರಿಸಲು ಆರೋಗ್ಯ ಅಧಿಕಾರಿಗಳು ಹರಸಾಹಸ ಪಡುತ್ತಿದ್ದಾರೆ ಎಂದು ಸರ್ಕಾರದ ಅಂಕಿಅಂಶಗಳು ತಿಳಿಸಿವೆ.

ಆರೋಗ್ಯ ಸಚಿವಾಲಯವು 9,066 ದೃಢಪಟ್ಟ ಪ್ರಕರಣಗಳು ಮತ್ತು 4,381 ಸಾವುಗಳನ್ನು ವರದಿ ಮಾಡಿದೆ. ಸಾವಿನ ಸಂಖ್ಯೆ ದೃಢಪಟ್ಟ ಪ್ರಕರಣಗಳ ಅರ್ಧದಷ್ಟಿದ್ದು, ಹೆಚ್ಚುತ್ತಿರುವ ಸಾವಿನ ಪ್ರಮಾಣ ಆರೋಗ್ಯ ಕಾರ್ಯಕರ್ತರು ಮತ್ತು ಅಧಿಕಾರಿಗಳಲ್ಲಿ ಆತಂಕ ಮೂಡಿಸಿದೆ. ದಾಖಲಾದ ಹೆಚ್ಚಿನ ಸಾವುಗಳು ಚಿಕಿತ್ಸಾ ಕೇಂದ್ರಗಳ ಹೊರಗೆ ಸಂಭವಿಸಿರುವುದು ಕಳವಳಕ್ಕೆ ಕಾರಣವಾಗಿದೆ. ಇತ್ತೀಚಿನ ವರದಿಯಲ್ಲಿ 88 ಹೊಸ ಪ್ರಕರಣಗಳು ದಾಖಲಾಗಿವೆ. ಸಮುದಾಯದೊಳಗೆ ಸೋಂಕು ಹರಡುವಿಕೆ ಮುಂದುವರಿದಿರುವುದು ಇನ್ನೂ ಗಂಭೀರ ಕಳವಳದ ವಿಷಯವಾಗಿದೆ ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ. ಸೋಂಕು ಮತ್ತಷ್ಟು ಸಮುದಾಯಗಳಿಗೆ ಹರಡುತ್ತಿರುವುದರಿಂದ ಹೊಸ ಸೋಂಕು ಕೇಂದ್ರಗಳು ಕಾಣಿಸಿಕೊಳ್ಳುತ್ತಿವೆ. ಪ್ರಸ್ತುತ ಏಳು ಪ್ರಾಂತ್ಯಗಳ 65 ಆರೋಗ್ಯ ವಲಯಗಳು ಸೋಂಕಿನಿಂದ ಬಾಧಿತವಾಗಿವೆ. ದೃಢಪಟ್ಟ ಪ್ರಕರಣಗಳು ಒಟ್ಟು ಪ್ರಕರಣಗಳ ಮೂರನೇ ಒಂದು ಭಾಗದಷ್ಟು ಮಾತ್ರವಾಗಿದ್ದು, ಹಲವು ಪ್ರಕರಣಗಳು ಪತ್ತೆಯಾಗದೆ ಉಳಿದಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಸೋಂಕಿಗೆ ಅಪರೂಪದ ಬುಂಡಿಬುಗ್ಯೊ ವೈರಸ್ ಕಾರಣವಾಗಿದೆ. ಇದಕ್ಕೆ ನಿರ್ದಿಷ್ಟವಾಗಿ ಅನುಮೋದಿತ ಲಸಿಕೆ ಅಥವಾ ಚಿಕಿತ್ಸೆ ಲಭ್ಯವಿಲ್ಲ ಎಂದು ವರದಿಯಲ್ಲಿ ತಿಳಿಸಲಾಗಿದೆ.



ವೈರಸ್ ನಿಯಂತ್ರಣದ ಪ್ರಯತ್ನಗಳಿಗೆ ಹಲವು ಅಂಶಗಳು ಅಡ್ಡಿಯಾಗಿವೆ. ಸರ್ಕಾರಿ ಪಡೆಗಳು ಮತ್ತು ಬಂಡಾಯ ಗುಂಪುಗಳ ನಡುವಿನ ಸಂಘರ್ಷ, ಆರೋಗ್ಯ ಮುನ್ನೆಚ್ಚರಿಕೆಗಳ ಬಗ್ಗೆ ಜನರ ನಿರ್ಲಕ್ಷ್ಯ, ಜನರ ನಿರಂತರ ಓಡಾಟ ಹಾಗೂ ವೈದ್ಯಕೀಯ ಸಾಮಗ್ರಿಗಳು ಮತ್ತು ಚಿಕಿತ್ಸಾ ಕೇಂದ್ರಗಳ ಕೊರತೆ ಪ್ರಮುಖ ಸವಾಲುಗಳಾಗಿವೆ. ಈ ಸಂಘರ್ಷವು ವಿಶ್ವದ ಅತ್ಯಂತ ಗಂಭೀರ ಮಾನವೀಯ ಬಿಕ್ಕಟ್ಟುಗಳಲ್ಲಿ ಒಂದಕ್ಕೆ ಕಾರಣವಾಗಿದೆ. ಕಾಂಗೋದಲ್ಲಿ ಈ ಹಿಂದೆ ಸಂಭವಿಸಿದ 16 ಎಬೋಲಾ ಸೋಂಕಿನ ಏಕಾಏಕಿ ಹರಡುವಿಕೆಗಳಿಗಿಂತಲೂ ಪ್ರಸ್ತುತ ಪರಿಸ್ಥಿತಿ ಗಂಭೀರವಾಗಿದೆ. ಅಲ್ಲದೆ, 2014ರಿಂದ 2016ರವರೆಗೆ ಪಶ್ಚಿಮ ಆಫ್ರಿಕಾದಲ್ಲಿ 11,000ಕ್ಕೂ ಹೆಚ್ಚು ಜನರ ಸಾವಿಗೆ ಕಾರಣವಾದ ಎಬೋಲಾ ಸಾಂಕ್ರಾಮಿಕದ ಮಟ್ಟವನ್ನು ತಲುಪುವ ಆತಂಕವೂ ವ್ಯಕ್ತವಾಗಿದೆ. “ಸರ್ಕಾರವು ಪ್ರಸ್ತುತ ಪರಿಸ್ಥಿತಿಯಿಂದ ತೀವ್ರ ಒತ್ತಡಕ್ಕೆ ಸಿಲುಕಿದೆ ಎಂದು ನನಗನಿಸುತ್ತದೆ. ಎಬೋಲಾ ವಿರುದ್ಧದ ಹೋರಾಟ ಪರಿಣಾಮಕಾರಿಯಾಗಿರುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ತನ್ನ ಜವಾಬ್ದಾರಿಗಳನ್ನು ಸಂಪೂರ್ಣವಾಗಿ ನಿರ್ವಹಿಸಬೇಕು” ಎಂದು ಸೋಂಕು ತೀವ್ರವಾಗಿ ಬಾಧಿಸಿರುವ ಇಟುರಿ ಪ್ರಾಂತ್ಯದ ರಾಜಧಾನಿ ಬುನಿಯಾದ ನಿವಾಸಿ ಸ್ಯಾಮ್ಯುಯೆಲ್ ಬುಜು ಹೇಳಿದರು.

ಕಳೆದ ವಾರ ಕಾಂಗೋದಿಂದ ಬಂದ ಎಬೋಲಾ ಪ್ರಕರಣವನ್ನು ವರದಿ ಮಾಡಿದ ಉಗಾಂಡಾದ ಬಳಿಕ, ಕೀನ್ಯಾ ಕೂಡ ಇಂತಹ ಪ್ರಕರಣವನ್ನು ವರದಿ ಮಾಡಿದ ಎರಡನೇ ದೇಶವಾಗಿದೆ. ಇದರಿಂದ ಗಡಿಯಾಚೆಗೂ ವೈರಸ್ ಹರಡುವ ಆತಂಕ ಹೆಚ್ಚಾಗಿದೆ.

## ದೆಹಲಿ ಪ್ರತಿಭಟನೆ : ಪೊಲೀಸರಿಂದ ನಾಲ್ಕು ಎಫ್‌ಐಆರ್ ದಾಖಲು

ನವದೆಹಲಿ: ನಿಷೇಧಾಜ್ಞೆ (ಬಿಎನ್‌ಎಸ್‌ಎಸ್ ಸೆಕ್ಷನ್ 163) ಉಲ್ಲಂಘನೆ, ಬ್ಯಾರಿಕೇಡ್‌ಗಳನ್ನು ಮುರಿದದ್ದು ಮತ್ತು ರಸ್ತೆಗಳನ್ನು ವಿರೂಪಗೊಳಿಸಿದ ಆರೋಪದ ಪ್ರತಿಭಟನಾಕಾರರ ಮೇಲೆ ದೆಹಲಿ ಪೊಲೀಸರು ನಾಲ್ಕು ಎಫ್‌ಐಆರ್‌ಗಳನ್ನು ದಾಖಲಿಸಿದ್ದಾರೆ. ತಿಲಕ್ ಮಾರ್ಗ ಪೊಲೀಸ್ ಠಾಣೆಯಲ್ಲಿ ಎರಡು, ಹಾಗೂ ಮಂದಿರ ಮಾರ್ಗ ಮತ್ತು ಬಾರಾಖಂಬಾ ರಸ್ತೆ ಠಾಣೆಗಳಲ್ಲಿ ತಲಾ ಒಂದರಂತೆ ಪ್ರಕರಣ ದಾಖಲಾಗಿವೆ.

ಪ್ರತ್ಯೇಕವಾಗಿ ತಪ್ಪು ಮಾಹಿತಿ ಹರಡಿದ ಆರೋಪದ ಮೇಲೆ ಮತ್ತೆ ನಾಲ್ಕು ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ. ಪಾಕಿಸ್ತಾನ ಮೂಲದ ಕೆಲವು ಸಾಮಾಜಿಕ ಜಾಲತಾಣ ಹ್ಯಾಂಡಲ್‌ಗಳು ಭಾರತ ವಿರೋಧಿ ನಿರೂಪಣೆಗಳನ್ನು ಹರಡಲು ಮತ್ತು ಕೋಮು ಸೌಹಾರ್ದತೆಯನ್ನು ಕದಡಲು ಯತ್ನಿಸುತ್ತಿವೆ ಎಂದು ಗುಪ್ತಚರ ಸಂಸ್ಥೆಗಳು ಹಾಗೂ ಪೊಲೀಸರು ಶಂಕಿಸಿದ್ದಾರೆ. 100 ಕ್ಕೂ ಹೆಚ್ಚು ಅನುಮಾನಾಸ್ಪದ ಖಾತೆಗಳು (ಪಾಕಿಸ್ತಾನದಿಂದ ಕಾರ್ಯನಿರ್ವಹಿಸುತ್ತಿರುವವು ಸೇರಿದಂತೆ) ಪೊಲೀಸರ ನಿಗಾದಲ್ಲಿವೆ. ಈಗಾಗಲೇ 500 ಕ್ಕೂ ಹೆಚ್ಚು ಆಕ್ಷೇಪಾರ್ಹ ಹಾಗೂ ದಾರಿತಪ್ಪಿಸುವ ವಿಷಯಗಳ ತುಣುಕುಗಳನ್ನು ತೆಗೆದುಹಾಕುವಂತೆ ಸಾಮಾಜಿಕ ಮಾಧ್ಯಮ ವೇದಿಕೆಗಳಿಗೆ ಪತ್ರ ಬರೆಯಲಾಗಿದೆ. ಹಳೆಯ ವೀಡಿಯೊಗಳನ್ನು ದೆಹಲಿಯ ಇತ್ತೀಚಿನ ಪ್ರತಿಭಟನೆಯ ದೃಶ್ಯಗಳೆಂದು ತಪ್ಪಾಗಿ ಬಿಂಬಿಸಲಾಗುತ್ತಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ತಪ್ಪು ಮಾಹಿತಿ ಹರಡುವಿಕೆಯ ಬಗ್ಗೆ ತನಿಖೆ ಪ್ರತಿಭಟನೆಯ ಹಿನ್ನೆಲೆಯಲ್ಲಿ ಸಾಮಾಜಿಕ ಮಾಧ್ಯಮಗಳಲ್ಲಿ ತಪ್ಪು ಮಾಹಿತಿ ಹರಡುತ್ತಿರುವ ಆರೋಪದ ಕುರಿತು ಪೊಲೀಸರು ಪ್ರತ್ಯೇಕವಾಗಿ ನಾಲ್ಕು ಎಫ್‌ಐಆರ್‌ಗಳನ್ನು ದಾಖಲಿಸಿದ್ದಾರೆ. ಪಾಕಿಸ್ತಾನ ಮೂಲದ ಕೆಲವು ಸಾಮಾಜಿಕ ಮಾಧ್ಯಮ ಖಾತೆಗಳು ದೆಹಲಿಯ ಪ್ರತಿಭಟನೆಗಳ ಕುರಿತು ಸುಳ್ಳು ಮಾಹಿತಿ ಹರಡುವ ಮೂಲಕ ಭಾರತ ವಿರೋಧಿ ನಿರೂಪಣೆಗಳನ್ನು ಬಲಪಡಿಸಲು ಮತ್ತು ಕೋಮು ಸೌಹಾರ್ದಕ್ಕೆ ಧಕ್ಕೆ ಉಂಟುಮಾಡಲು ಪ್ರಯತ್ನಿಸುತ್ತಿರಬಹುದು ಎಂಬ ಶಂಕೆಯನ್ನು ತನಿಖಾಧಿಕಾರಿಗಳು ವ್ಯಕ್ತಪಡಿಸಿದ್ದಾರೆ. ಈ ಸಂಬಂಧ 500ಕ್ಕೂ ಹೆಚ್ಚು ಆಕ್ಷೇಪಾರ್ಹ ಹಾಗೂ ದಾರಿತಪ್ಪಿಸುವ ಪೋಸ್ಟ್‌ಗಳು, ವೀಡಿಯೊಗಳು ಮತ್ತು ಇತರ ಡಿಜಿಟಲ್ ವಿಷಯಗಳನ್ನು ತೆಗೆದುಹಾಕುವಂತೆ ಸಾಮಾಜಿಕ ಮಾಧ್ಯಮ ವೇದಿಕೆಗಳಿಗೆ ಪೊಲೀಸರು ಪತ್ರ ಬರೆದಿದ್ದಾರೆ. ಅಲ್ಲದೆ, 100ಕ್ಕೂ ಹೆಚ್ಚು ಅನುಮಾನಾಸ್ಪದ ಸಾಮಾಜಿಕ ಮಾಧ್ಯಮ ಖಾತೆಗಳನ್ನು ಪರಿಶೀಲಿಸಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ.

ಹಳೆಯ ಗಲಭೆಗಳು ಮತ್ತು ಹಿಂಸಾತ್ಮಕ ಘಟನೆಗಳಿಗೆ ಸಂಬಂಧಿಸಿದ ವಿಡಿಯೋಗಳನ್ನು ಸಂಪಾದಿಸಿ, ಅವುಗಳನ್ನು ದೆಹಲಿಯಲ್ಲಿ ಇತ್ತೀಚೆಗೆ ನಡೆದ ಪ್ರತಿಭಟನೆಗಳ ದೃಶ್ಯಗಳೆಂದು ಬಿಂಬಿಸಲಾಗುತ್ತಿದೆ ಎಂಬ ಆರೋಪವೂ ಕೇಳಿಬಂದಿದೆ. ಭಾರತೀಯ ಯುವಕರ ಹೆಸರಿನಲ್ಲಿ ನಕಲಿ ಖಾತೆಗಳನ್ನು ಸೃಷ್ಟಿಸಿ, ಇಂತಹ ಮಾಹಿತಿಗೆ ಸ್ಥಳೀಯ ಮೂಲದ ವಿಶ್ವಾಸಾರ್ಹತೆಯನ್ನು ಕಲ್ಪಿಸಲು ಪ್ರಯತ್ನಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

**ಸೇನೆ ನಿಯೋಜನೆ, ಮಾರುಕಟ್ಟೆ ಬಂದ್ ಸುಳ್ಳು ಸುದ್ದಿ**

ಅಕ್ಟೋಬರ್ 10ರಂದು ದೆಹಲಿಯಲ್ಲಿ ನಡೆದ ಪ್ರದರ್ಶನಗಳ ಸಂದರ್ಭದಲ್ಲಿ ವ್ಯಾಪಕ ಹಿಂಸಾಚಾರ ನಡೆದಿದೆ ಎಂಬ ಹೇಳಿಕೆಗಳು ಕೆಲವು ಸಾಮಾಜಿಕ ಮಾಧ್ಯಮ ಖಾತೆಗಳಲ್ಲಿ ಹರಿದಾಡಿದ್ದವು. ಮಂಗಳವಾರ ದೆಹಲಿಯಲ್ಲಿ ಸೇನೆಯನ್ನು ನಿಯೋಜಿಸಲಾಗಿದೆ ಮತ್ತು ಮಾರುಕಟ್ಟೆಗಳನ್ನು ಮುಚ್ಚಲಾಗಿದೆ ಎಂಬ ಮಾಹಿತಿಯನ್ನೂ ಎಕ್?ಸ ಖಾತೆಯೊಂದು ಹಂಚಿಕೊಂಡಿತ್ತು. ಇದಕ್ಕೆ ಪ್ರತಿಕ್ರಿಯಿಸಿದ್ದ ದೆಹಲಿ ಪೊಲೀಸರು, ಪ್ರಸಾರವಾಗಿದ್ದ ವಿಡಿಯೋ ಸಂದರ್ಭಕ್ಕೆ ಹೊಂದಿಕೆಯಾಗುವುದಿಲ್ಲ ಮತ್ತು ಪ್ರಸ್ತುತ ಘಟನೆಗಳಿಗೆ ಸಂಬಂಧಿಸಿಲ್ಲ ಎಂದು ಸ್ಪಷ್ಟಪಡಿಸಿದ್ದರು. ಇಂತಹ ತಪ್ಪು ಮಾಹಿತಿಯ ಮೂಲವನ್ನು ಪತ್ತೆಹಚ್ಚಲು ತನಿಖೆ ಮುಂದುವರಿದಿದೆ. ಸೋಮವಾರದ ಇಂಡಿಯಾ ಬ್ಲಾಕ್ ಪ್ರತಿಭಟನೆಯ ಸಂದರ್ಭದಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಸೆಕ್ಷನ್ 163ರಡಿ ನಿಷೇಧಾಜ್ಞೆ ಜಾರಿಯಲ್ಲಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಅನಧಿಕೃತ ಸಭೆಗಳನ್ನು ತಡೆಯಲು ಹಾಗೂ ಪ್ರದೇಶದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ನಿರ್ಬಂಧಗಳನ್ನು ವಿಧಿಸಲಾಗಿತ್ತು ಎಂಬುದು ಪೊಲೀಸರ ವಾದವಾಗಿದೆ. ನಿಷೇಧಾಜ್ಞೆ ಜಾರಿಯಲ್ಲಿದ್ದರೂ ಪ್ರತಿಭಟನೆ ನಡೆಸಿರುವುದರಿಂದ ಸಭೆ ಅನಧಿಕೃತವಾಗಿತ್ತು ಎಂದು ಪೊಲೀಸ್ ಮೂಲಗಳು ಹೇಳಿವೆ. ಆದರೆ, ಪ್ರತಿಭಟನೆಗೆ ಸಂಬಂಧಿಸಿದ ಆರೋಪಗಳು ಮತ್ತು ಅವುಗಳ ಕಾನೂನುಬದ್ಧತೆಯ ಕುರಿತು ಅಂತಿಮ ನಿರ್ಧಾರವನ್ನು ಸಂಬಂಧಿತ ತನಿಖೆ ಹಾಗೂ ನ್ಯಾಯಾಂಗ ಪ್ರಕ್ರಿಯೆಯ ಆಧಾರದಲ್ಲಿ ಪರಿಗಣಿಸಬೇಕಿದೆ.



**ರಾಹುಲ್ ಗಾಂಧಿ ನೇತೃತ್ವದಲ್ಲಿ ಮೆರವಣಿಗೆ**

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ಇಂಡಿಯಾ ಬ್ಲಾಕ್‌ನ ಪ್ರಮುಖ ನಾಯಕರು, ಕಾರ್ಯಕರ್ತರು ಮತ್ತು ಬೆಂಬಲಿಗರು ಸೋಮವಾರ ದೆಹಲಿಯಲ್ಲಿ ಪ್ರತಿಭಟನೆ ನಡೆಸಿದರು. ಬಾರಾಖಂಬಾ ರಸ್ತೆ ಪ್ರದೇಶದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಸುಪ್ರೀಂ ಕೋರ್ಟ್ ಕಡೆಗೆ ಮೆರವಣಿಗೆ ನಡೆಸಿದರು. ಈ ಸಂಬಂಧ ಅರ್ಜಿಯನ್ನೂ ಸಲ್ಲಿಸಲಾಯಿತು ಎಂದು ವರದಿಯಾಗಿದೆ. ಕನ್ನಾಟ್ ಪ್ಲೇಸ್‌ನಿಂದ ಸುಪ್ರೀಂ ಕೋರ್ಟ್ ಕಡೆಗಿನ ಮಾರ್ಗಗಳಲ್ಲಿ ಸಾವಿರಾರು ಪ್ರತಿಭಟನಾಕಾರರು ಧ್ವಜಗಳನ್ನು ಹಿಡಿದು ಘೋಷಣೆಗಳನ್ನು ಕೂಗಿದರು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆ ನೀಡಬೇಕು ಹಾಗೂ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯನ್ನು ನಿಲ್ಲಿಸಬೇಕು ಎಂಬುದು ಪ್ರತಿಭಟನಾಕಾರರ ಪ್ರಮುಖ ಬೇಡಿಕೆಯಾಗಿತ್ತು. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ನಡೆದ ಈ ಮೆರವಣಿಗೆಯಲ್ಲಿ, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆ ಹಾಗೂ ಎಸ್‌ಐಆರ್ ಪ್ರಕ್ರಿಯೆಯನ್ನು ನಿಲ್ಲಿಸುವಂತೆ ಒತ್ತಾಯಿಸಿ ಸಾವಿರಾರು ಕಾರ್ಯಕರ್ತರು ಸುಪ್ರೀಂಕೋರ್ಟ್‌ಗೆ ಪ್ರತಿಭಟನಾ ಮೆರವಣಿಗೆ ನಡೆಸಿದ್ದರು.

## ಕುಟುಕು ಕಾರ್ಯಾಚರಣೆ ವಿವಾದ : ಎಚ್‌ಡಿಕೆ ವಿರುದ್ಧ ತಿರುಗಿಬಿದ್ದ ಕಾಂಗ್ರೆಸ್ ನಾಯಕರು

ಬೆಂಗಳೂರು: ಮಾಜಿ ಸಿಎಂ ಸಿದ್ದರಾಮಯ್ಯ ಅವರಿಗೆ ಸಂಬಂಧಿಸಿದ ಕುಟುಕು ಕಾರ್ಯಾಚರಣೆಯ ವಿವಾದ ರಾಜ್ಯ ರಾಜಕಾರಣ ದಲ್ಲಿ ತೀವ್ರ ಸ್ವರೂಪ ಪಡೆದು ಕೊಂಡಿದ್ದು, ಕೇಂದ್ರ ಸಚಿವ ಹಾಗೂ ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಅವರ ಹೇಳಿಕೆಗಳಿಗೆ ಕಾಂಗ್ರೆಸ್ ನಾಯಕರು ತಿರುಗೇಟು ನೀಡುತ್ತಿದ್ದಾರೆ.

ಜಲಸಂಪನೂಲ ಸಚಿವ ಚಲುವರಾಯಸ್ವಾಮಿ, ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್, ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಸೇರಿದಂತೆ ಹಲವು ನಾಯಕರು ಈ ವಿಚಾರವಾಗಿ ಪ್ರತಿಕ್ರಿಯಿಸಿದ್ದು ತೀವ್ರ ಬೇಸರ ವ್ಯಕ್ತ ಪಡಿಸಿದ್ದಾರೆ. ಕಾಂಗ್ರೆಸ್ ಶಾಸಕರು, ಕುಟುಕು ಕಾರ್ಯಾಚರಣೆಯ ಹಿಂದಿರುವವರನ್ನು ಪತ್ತೆಹಚ್ಚಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಚಲುವರಾಯಸ್ವಾಮಿ, ಕುಟುಕು ಕಾರ್ಯಾಚರಣೆ ದೂರುಗಳನ್ನು ಕುಮಾರಸ್ವಾಮಿಯವರು ಕೇಂದ್ರ ಸರ್ಕಾರದಿಂದಲೇ ಸಿಬಿಐ ತನಿಖೆ ಮಾಡಿಸಲಿ ಎಂದು ಸವಾಲು ಹಾಕಿದ್ದಾರೆ. ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಈ ಹಿಂದೆ ಜಾರಿ ನಿರ್ದೇಶನಾಲಯ ಮತ್ತು ಆದಾಯ ತೆರಿಗೆ ಇಲಾಖೆಗಳ ಮೂಲಕ ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಗುರಿಯಾಗಿಸಲಾಗುತ್ತಿತ್ತು. ಇದೀಗ ಕುಟುಕು ಕಾರ್ಯಾಚರಣೆಯ ಹೆಸರಿನಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಗುರಿಯಾಗಿಸುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು. ಎಚ್.ಡಿ.ಕುಮಾರಸ್ವಾಮಿ ಅವರ ಸರ್ಕಾರವನ್ನು ಉಳಿಸಿಕೊಳ್ಳುವ ಪ್ರಯತ್ನ ನಡೆದಿದ್ದ ಸಂದರ್ಭದಲ್ಲಿ ಬಿ.ಎಸ್. ಯಡಿಯೂರಪ್ಪ ಅವರಿಗೆ ಸಂಬಂಧಿಸಿದ ಧ್ವನಿಮುದ್ರಣ ಬಹಿರಂಗವಾಗಿತ್ತು. ಈ ವಿಚಾರ ವಿಧಾನಮಂಡಲದಲ್ಲಿಯೂ ಚರ್ಚೆಯಾಗಿತ್ತು. ಕರ್ನಾಟಕದ ಜನರಿಗೆ ಯಾರ ರಾಜಕೀಯ ಇತಿಹಾಸ ಏನು ಎಂಬುದು ತಿಳಿದಿದೆ ಎಂದು ಹೇಳಿದರು.

ವಿಡಿಯೊಗಳನ್ನು ತೋರಿಸಿ ಸಿದ್ದರಾಮಯ್ಯ ಅವರಿಂದ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಡಿಸಲಾಗಿದೆ ಎಂಬ ಕುಮಾರಸ್ವಾಮಿ ಅವರ



ಆರೋಪಕ್ಕೆ ಪ್ರತಿಕ್ರಿಯಿಸುವ ಅಗತ್ಯ ಇಲ್ಲ. ಕಾಂಗ್ರೆಸ್ ಪಕ್ಷ ಕುಮಾರಸ್ವಾಮಿ ಅವರ ಪೊಳ್ಳು ಹೇಳಿಕೆಗಳ ಆಧಾರದ ಮೇಲೆ ನಡೆಯುವುದಿಲ್ಲ ಎಂದು ತಿರುಗೇಟು ನೀಡಿದರು. ರಾಜ್ಯ ಸರ್ಕಾರದ ಸಚಿವರನ್ನು ಗುರಿಯಾಗಿಸಿಕೊಂಡು ಕುಟುಕು ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂಬ ಆರೋಪಗಳ ಕುರಿತು ಮಾತನಾಡಿದ ಅವರು, ಕುಮಾರಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮತ್ತು ಬಿಜೆಪಿ ನಾಯಕ ಆರ್. ಅಶೋಕ್ ಸೇರಿದಂತೆ ಹಲವು ನಾಯಕರು ಈ ವಿಚಾರವಾಗಿ ಪದೇಪದೇ ಹೇಳಿಕೆ ನೀಡುತ್ತಿದ್ದಾರೆ. ಈ ಕುರಿತು ಯಾರಿಗಾದರೂ ಮಾಹಿತಿ ಅಥವಾ ದಾಖಲೆಗಳಿದ್ದರೆ ದೂರು ನೀಡಲಿ. ಸಮರ್ಥ ಪೊಲೀಸ್ ವ್ಯವಸ್ಥೆಯ ಮೂಲಕ ತನಿಖೆ ನಡೆಸಿ ಸತ್ಯವನ್ನು ಹೊರತರುತ್ತೇವೆ ಎಂದು ಹೇಳಿದರು. ಪ್ರಜ್ವಲ್ ರೇವಣ್ಣ ಪ್ರಕರಣಕ್ಕೆ ಸಂಬಂಧಿಸಿದ ವಿಡಿಯೊಗಳನ್ನು ಕಾಂಗ್ರೆಸ್‌ನವರೇ ಸಿದ್ಧಪಡಿಸಿದ್ದಾರೆಯೇ ತಮ್ಮ ಕುಟುಂಬದ ಸದಸ್ಯರನ್ನು ಸರಿಯಾಗಿ ಬೆಳೆಸುವ ಜವಾಬ್ದಾರಿಯನ್ನು ನಿರ್ವಹಿಸದೆ ಇತರರ ಮೇಲೆ ಆರೋಪ ಹೊರಿಸುವುದು ಸರಿಯಲ್ಲ ಎಂದು ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ನಡೆಸಿದರು. ಕಾಂಗ್ರೆಸ್ ಸರ್ಕಾರ ಯಾರನ್ನೂ ವೈಯಕ್ತಿಕ ದ್ವೇಷದಿಂದ ಗುರಿಯಾಗಿಸಿಕೊಂಡಿಲ್ಲ. ಕುಮಾರಸ್ವಾಮಿ ಅವರು ಮಾತನಾಡುವಾಗ ತಮ್ಮ ಮಾತಿನ ಮೇಲೆ ಹಿಡಿತವಿಟ್ಟುಕೊಳ್ಳಬೇಕು ಎಂದು ಎಚ್ಚರಿಸಿದರು.

ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಕೂಡ ಕುಟುಕು ಕಾರ್ಯಾಚರಣೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕುಟುಕು ಕಾರ್ಯಾಚರಣೆ ಕೆಟ್ಟ ಚಾಳಿಯಾಗಿದ್ದು, ಯಾರೇ ನಡೆಸಿದರೂ ಅದನ್ನು ಒಪ್ಪಲು ಸಾಧ್ಯವಿಲ್ಲ. ರಾಜಕೀಯದಲ್ಲಿ ಇಂತಹ ವಿಧಾನಗಳನ್ನು ಅನುಸರಿಸಬಾರದು ಎಂದು ಹೇಳಿದರು. ಸಿದ್ದರಾಮಯ್ಯ ಅವರು ದೇಶದಲ್ಲಿಯೇ ಅತ್ಯುತ್ತಮ ನಾಯಕರಲ್ಲಿ ಒಬ್ಬರಾಗಿದ್ದು, ಅವರ ವಕ್ತಿತ್ವಕ್ಕೆ ಧಕ್ಕೆ ತರುವ ಪ್ರಯತ್ನಗಳು ನಡೆಯಬಾರದು. ಹಣ ಗಳಿಸುವ ಉದ್ದೇಶದಿಂದಾಗಲಿ ಅಥವಾ ರಾಜಕೀಯ ಕಾರಣಗಳಿಗಾಗಲಿ ವ್ಯಕ್ತಿಗಳ ಚಾರಿತ್ರ್ಯವಧೆ ಮಾಡುವ ಪ್ರವೃತ್ತಿ ನಿಲ್ಲಬೇಕು. ಕುಟುಕು ಕಾರ್ಯಾಚರಣೆಯಂತಹ ದುರುಪಯೋಗದ ವಿಧಾನಗಳು ಸಂಪೂರ್ಣವಾಗಿ ಅಂತ್ಯಗೊಳ್ಳಬೇಕು ಎಂದು ಎಂ.ಬಿ. ಪಾಟೀಲ್ ಆಗ್ರಹಿಸಿದರು. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಕುಟುಕು ಕಾರ್ಯಾಚರಣೆಯ ಕುರಿತು ಪ್ರತಿಕ್ರಿಯಿಸಲು ನಿರಾಕರಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಸಚಿವನಾಗಿ ಕೆಲಸ ಮಾಡಿದ್ದು, ಅವರು ತಮಗೆ ಸಂಪೂರ್ಣ ಸ್ವಾತಂತ್ರ್ಯ ನೀಡಿದ್ದರು ಎಂದು ಹೇಳಿದರು. ತಮ ಮೂರು ವರ್ಷಗಳ ಆಡಳಿತಾವಧಿಯಲ್ಲಿ ಸಿದ್ದರಾಮಯ್ಯ ಅವರು 11 ಇಲಾಖೆಗಳ ಸಭೆ ಮಾತ್ರ ನಡೆಸಿದ್ದರು. ಉಳಿದ ಇಲಾಖೆಗಳ ಸಚಿವರಿಗೆ ಸಂಪೂರ್ಣ ಸ್ವಾತಂತ್ರ್ಯ ನೀಡಿದ್ದರು. ಇದರಿಂದ ಸಚಿವರು ತಮ ಇಲಾಖೆಗಳ ವ್ಯಾಪ್ತಿಯಲ್ಲಿ ಉತ್ತಮವಾಗಿ ಕೆಲಸ ಮಾಡಲು ಸಾಧ್ಯವಾಯಿತು ಎಂದು ತಿಳಿಸಿದರು. ಕುಟುಕು ಕಾರ್ಯಾಚರಣೆಯ ಕುರಿತು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈಗಾಗಲೇ ಉತ್ತರ ನೀಡಿದ್ದಾರೆ. ಅದರ ಬಗ್ಗೆ ನಾನು ಮಾತನಾಡುವುದಿಲ್ಲ ಎಂದರು. ಕೆಲವು ನಾಯಕರಿಗೆ ಬೆಳಗ್ಗೆ ಎದ್ದು ಮಾಧ್ಯಮಗಳ ಮುಂದೆ ಬಂದು ಸರ್ಕಾರವನ್ನು ಟೀಕಿಸುವುದೇ ಅಭ್ಯಾಸವಾಗಿದೆ. ಅಂತಹ ಹೇಳಿಕೆಗಳಿಗೆ ಪ್ರತಿಯೊಂದು ಸಂದರ್ಭದಲ್ಲಿಯೂ ಉತ್ತರ ನೀಡುವ ಅಗತ್ಯವಿಲ್ಲ ಎಂದು ಮಧು ಬಂಗಾರಪ್ಪ ಅಭಿಪ್ರಾಯಪಟ್ಟರು. ಶಾಸಕ ಅಶೋಕ್ ಪಟ್ಟಣ್ ಕೂಡ ಪ್ರಕರಣದ ಕುರಿತು ತನಿಖೆ ನಡೆಸುವಂತೆ ಆಗ್ರಹಿಸಿದ್ದಾರೆ. ಕುಟುಕು ಕಾರ್ಯಾಚರಣೆ ನಡೆಸಿದವರು ಯಾರು ಎಂಬುದು ಬಹಿರಂಗವಾಗಬೇಕು. ತನಿಖೆಯನ್ನು ಅಪರಾಧ ತನಿಖಾ ಇಲಾಖೆ ನಡೆಸುತ್ತದೆಯೇ ಅಥವಾ ಕೇಂದ್ರ ತನಿಖಾ ದಳಕ್ಕೆ ವಹಿಸಲಾಗುತ್ತದೆಯೇ ಎಂಬುದು ಸರ್ಕಾರದ ನಿರ್ಧಾರಕ್ಕೆ ಬಿಟ್ಟ ವಿಚಾರ. ಆದರೆ, ಇದರ ಹಿಂದೆ ಇರುವವರನ್ನು ಪತ್ತೆಹಚ್ಚಿ ತಪ್ಪಿತಸ್ಥರಿಗೆ ಶಿಕ್ಷೆಯಾಗುವಂತೆ ಮಾಡಬೇಕು ಎಂದು ಹೇಳಿದರು.

ಮುಖ್ಯಮಂತ್ರಿ, ಸಚಿವರಿಗೆ ಎಚ್ಚರಿಕೆಯಿಂದ ಇರುವಂತೆ ಸೂಚನೆ ನೀಡಿದ್ದರೆ, ಅದು ಶಾಸಕರಿಗೂ ಅನ್ವಯಿಸುತ್ತದೆ. ಎಲ್ಲರೂ ಎಚ್ಚರಿಕೆಯಿಂದ ಇರಬೇಕು ಎಂಬ ಸಂದೇಶವನ್ನು ಸರ್ಕಾರ ನೀಡಿದೆ ಎಂದು ಅಶೋಕ್ ಪಟ್ಟಣ್ ತಿಳಿಸಿದರು. ಶಾಸಕ ಬೇಳೂರು ಗೋಪಾಲಕೃಷ್ಣ ಮಾತನಾಡಿ, ಕುಟುಕು ಕಾರ್ಯಾಚರಣೆಯ ವಿವಾದದಲ್ಲಿ ಮಾಜಿ ಮುಖ್ಯಮಂತ್ರಿಯ ಹೆಸರು ಕೇಳಿಬಂದಿರುವುದು ನೋವಿನ ಸಂಗತಿ ಎಂದರು. ಇಂತಹ ಪ್ರಯತ್ನಗಳ ಮೂಲಕ ನಾಯಕರನ್ನು ನಿಷ್ಕ್ರಿಯಗೊಳಿಸುವುದು ಸರಿಯಲ್ಲ. ಸಿದ್ದರಾಮಯ್ಯ ಅವರು ಸಮರ್ಥರಾಗಿದ್ದು, ಇಂತಹ ಬೆಳವಣಿಗೆಗಳ ಬಗ್ಗೆ ಮೊದಲೇ ಎಚ್ಚರಿಕೆ ನೀಡಿದ್ದಾರೆ ಎಂದು ಹೇಳಿದರು. ಈ ಹಿಂದೆ ಕುಮಾರಸ್ವಾಮಿ ಅವರು ಪೆನ್‌ಡ್ರೈವ್ ತೋರಿಸಿದ್ದ ವಿಚಾರವನ್ನು ಪ್ರಸ್ತಾಪಿಸಿದ ಬೇಳೂರು ಗೋಪಾಲಕೃಷ್ಣ, ಆಗಲೇ ಅದರ ಕುರಿತು ಸಮಗ್ರ ತನಿಖೆ ನಡೆಸಬೇಕಿತ್ತು ಎಂದು ಅಭಿಪ್ರಾಯಪಟ್ಟರು. ಈಗ ನಡೆಯುತ್ತಿರುವ ಬೆಳವಣಿಗೆಗಳ ಹಿಂದೆ ಪಿತೂರಿ ಇದೆ ಎಂಬ ಶಂಕೆ ವ್ಯಕ್ತಪಡಿಸಿದ ಅವರು, ಕುಮಾರಸ್ವಾಮಿ ಅವರ ಬಳಿ ದಾಖಲೆಗಳಿದ್ದರೆ ಅವುಗಳನ್ನು ಸರ್ಕಾರಕ್ಕೆ ಸಲ್ಲಿಸಲಿ. ಅಗತ್ಯವಿದ್ದರೆ ಸರ್ಕಾರ ತನಿಖೆ ನಡೆಸಲಿದೆ ಎಂದು ಸವಾಲು ಹಾಕಿದರು. ಕುಮಾರಸ್ವಾಮಿ ಅವರು ಈ ಹಿಂದೆ ಪೆನ್‌ಡ್ರೈವ್ ವಿಚಾರವನ್ನು ಮುಂದಿಟ್ಟುಕೊಂಡಿದ್ದರು, ಈಗ ಕುಟುಕು ಕಾರ್ಯಾಚರಣೆಯ ವಿಚಾರವನ್ನು ಮುಂದಿಟ್ಟುಕೊಂಡಿದ್ದಾರೆ ಎಂದು ವ್ಯಂಗ್ಯವಾಡಿದ ಬೇಳೂರು ಗೋಪಾಲಕೃಷ್ಣ, ಪಕ್ಷವನ್ನು ಅಸ್ಥಿರಗೊಳಿಸುವ ಪ್ರಯತ್ನ ಮಾಡಬಾರದು ಎಂದು ಎಚ್ಚರಿಸಿದರು. ಸಣ್ಣ ವಿಚಾರಗಳನ್ನು ದೊಡ್ಡ ವಿವಾದವನ್ನಾಗಿ ಮಾಡುವುದು ಸರಿಯಲ್ಲ. ವ್ಯಕ್ತಿಗಳ ಮಾನಹಾನಿಗೆ ಕಾರಣವಾಗುವ ಪ್ರಯತ್ನಗಳನ್ನು ಸಹಿಸಲು ಸಾಧ್ಯವಿಲ್ಲ. ಪ್ರಕರಣದ ಕುರಿತು ಮುಖ್ಯಮಂತ್ರಿ ಸುಮ್ಮನೆ ಕುಳಿತುಕೊಳ್ಳುವುದಿಲ್ಲ; ತನಿಖೆ ನಡೆಸಿ ಸತ್ಯವನ್ನು ಹೊರತರುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

Publisher and Owned by CHANDRAKANTA From Near Durgamma Temple Dyampur, Koppal District- 583232 Printed at VINAYA Printers, VINAYA Publication Word No.01 Ballary Pootwer, Bhagynagar, Koppal- 583238, Editor : CHANDRAKANTA enammadhruthinews@gmail.com